ವಿಜಯಪುರ | ಸಂಪುಟ 04 | ಸಂಚಿಕೆ 062 | ಪುಟ 4 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com RNI NO: KARKAN/2023/86203 ಶುಕ್ರವಾರ, ಮಾರ್ಚ್, 24, 2026



"ಜೈನ ಧರ್ಮಕ್ಕೆ ಪ್ರತ್ಯೇಕ ಧರ್ಮ ಸ್ಥಾನಮಾನ ದೊರಕುವ ಮುನ್ನವೂ ಸಹ ಕೆಲ ರಾಜ್ಯಗಳಲ್ಲಿ ಅದಕ್ಕೆ ಅಲ್ಪಸಂಖ್ಯಾತ ಸ್ಥಾನಮಾನ ನೀಡಲಾಗಿ-ತ್ತು, ಹೀಗಾಗಿ ಅದರಂತೆ ನಮ್ಮ ರಾಜ್ಯದಲ್ಲೂ ಸಹ ಸರ್ಕಾರವು ಲಿಂಗಾಯತ-ರಿಗೆ ಅಲ್ಪಸಂಖ್ಯಾತ ಸ್ಥಾನಮಾನ ನೀಡಲು ಮುಂದಾಗಲಿ."

ಡಾ.ಶಶಿಕಾಂತ ಪಟ್ಟಣ
ಅಧ್ಯಕ್ಷರು ಬಸವ ತಿಳುವಳಿಕೆ ಮತ್ತು ಸಂಶೋಧನೆ ಕೇಂದ್ರ, ಪುಣೆ

### ಬೆಂಗಳೂರಿನಲ್ಲಿ ಪ್ರಧಾನಿ ಮೋದಿ 'ಭಯೋತ್ಪಾದಕ' ಹೇಳಿಕೆ ಖಂಡಿಸಿ ಬಿಜೆಪಿ ಪ್ರತಿಭಟನೆ।

# ಮಲ್ಲಿಕಾರ್ಜುನ ಖರ್ಗೆ ಕ್ಷಮೆಯಾಚನೆಗೆ ಬಿಜೆಪಿ ಆಗ್ರಹ

ಬೆಂಗಳೂರು: ಪ್ರಧಾನಿ ನರೇಂದ್ರ ಮೋದಿ ಅವರನ್ನು 'ಭಯೋತ್ಪಾದಕ' ಎಂದು ಕರೆದ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ಹೇಳಿಕೆಯನ್ನು ಖಂಡಿಸಿ, ಕರ್ನಾಟಕ ಬಿಜೆಪಿ ಗುರುವಾರ ವಿಧಾನಸೌಧದ ಮಹಾತ್ಮ ಗಾಂಧಿ ಪ್ರತಿಮೆ ಮುಂದೆ ಪ್ರತಿಭಟನೆ ನಡೆಸಿತು ಮತ್ತು ಅವರು ದೇಶದ ಕ್ಷಮೆಯಾಚಿಸಬೇಕು ಎಂದು ಒತ್ತಾಯಿಸಿತು. ರಾಜ್ಯ ಬಿಜೆಪಿ ಅಧ್ಯಕ್ಷ ಬಿ ವೈ ವಿಜಯೇಂದ್ರ, ವಿಧಾನಸಭೆ ಮತ್ತು ಪರಿಷತ್ತಿನ ವಿರೋಧ ಪಕ್ಷದ ನಾಯಕರಾದ ಆರ್ ಅಶೋಕ್ ಹಾಗೂ ಛಲವಾದಿ ನಾರಾಯಣಸ್ವಾಮಿ, ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಮತ್ತು ಪಕ್ಷದ ಹಲವಾರು ಶಾಸಕರು ಹಾಗೂ ನಾಯಕರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

ಈ ವೇಳೆ ಬಿಜೆಪಿ ನಾಯಕರು ಫಲಕಗಳನ್ನು ಹಿಡಿದು ಖರ್ಗೆ ವಿರುದ್ಧ ಘೋಷಣೆಗಳನ್ನು ಕೂಗಿದರು.

ನಮ್ಮ ಪ್ರಧಾನಿ ನರೇಂದ್ರ ಮೋದಿಯವ-ರಿಗೆ ಹಲವಾರು ದೇಶಗಳು ತಮ್ಮ ಅತ್ಯುನ್ನತ ನಾಗ-ರಿಕ ಪ್ರಶಸ್ತಿಗಳನ್ನು ನೀಡಿ ಗೌರವಿಸಿವೆ. ಭಾರತದ ಬೇರೆ ಯಾವುದೇ ಪ್ರಧಾನಿ ಇಷ್ಟೊಂದು ಪ್ರಮಾಣದಲ್ಲಿ ಪ್ರಶಸ್ತಿಗಳನ್ನು ಪಡೆದಿಲ್ಲ. ಇಡೀ ಜಗತ್ತು ನರೇಂದ್ರ ಮೋದಿಯವರ ನಾಯಕತ್ವವನ್ನು ಗುರುತಿಸಿರುವ ಸಮಯದಲ್ಲಿ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭಯೋತ್ಪಾದಕ ಎಂದು ಕರೆದಿದ್ದಾರೆ. ಬಿಜೆಪಿ ಮಾತ್ರವಲ್ಲ, ಇಡೀ ದೇಶವೇ ಇದನ್ನು ಖಂಡಿಸುತ್ತದೆ" ಎಂದು ವಿಜಯೇಂದ್ರ ಹೇಳಿದರು.

"ಹಿಂದುಳಿದ ವರ್ಗದಿಂದ ಬಂದಿರುವ ನರೇಂದ್ರ ಮೋದಿ ಸತತ ಹನ್ನೆರಡು ವರ್ಷಗಳ ಕಾಲ ಪ್ರಧಾನಿಯಾಗಿ ದೇಶವನ್ನು ಯಶಸ್ವಿಯಾಗಿ ಮುನ್ನಡೆಸಿದ್ದಾರೆ. ಕಾಂಗ್ರೆಸ್ ಗೆ ಇದನ್ನು ಒಪ್ಪಿಕೊಳ್ಳಲು ಸಾಧ್ಯವಾಗುತ್ತಿಲ್ಲ. ದೇಶಾದ್ಯಂತ ಪಕ್ಷ ದಿನೇ ದಿನೇ ಕುಸಿಯುತ್ತಿದೆ, ಆದ್ದರಿಂದ ಅವರು ಮೋದಿ ವಿರುದ್ಧ ಇಂತಹ ಹೇಳಿಕೆಗಳನ್ನು ನೀಡುತ್ತಿದ್ದಾರೆ. ಇದನ್ನು ನಾವು ಬಲವಾಗಿ ಖಂಡಿಸುತ್ತೇವೆ ಮತ್ತು ಖರ್ಗೆ ಅವರು ದೇಶದ ಕ್ಷಮೆಯಾಚಿಸಬೇಕು" ಎಂದು ಆಗ್ರಹಿಸಿದರು.






"ಪ್ರಧಾನಿ ಮೋದಿ ಬಗೆಗಿನ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ಹೇಳಿಕೆಯು ಕಾಂಗ್ರೆಸ್ ಪಕ್ಷದ "ಅವನತಿ ಸಂಸ್ಕೃತಿಯನ್ನು" ಪ್ರತಿಬಿಂಬಿಸುತ್ತದೆ."

■ ಆರ್ ಅಶೋಕ್
ವಿಧಾನಸಭೆ ವಿಪಕ್ಷ ನಾಯಕರು



"ಎಐಸಿಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ ಮತ್ತು ಕಾಂಗ್ರೆಸ್ ಪಕ್ಷವು ನರೇಂದ್ರ ಮೋದಿಯವರ ಜನಪ್ರಿಯತೆಯನ್ನು ಒಪ್ಪಿಕೊಳ್ಳಲು ಸಿದ್ಧವಿಲ್ಲ."

■ ಬಿ.ವೈ.ವಿಜಯೇಂದ್ರ
ಬಿಜೆಪಿ ರಾಜ್ಯಾಧ್ಯಕ್ಷರು

# ಸಿಇಟಿ ಪರೀಕ್ಷಾ ಕೇಂದ್ರಗಳಿಗೆ ಜಿಪಂ ಸಿಇಓ ರಿಷಿ ಆನಂದ ಭೇಟಿ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಜಿಲ್ಲೆಯಲ್ಲಿ ಗುರುವಾರ ನಡೆದ ವೃತ್ತಿಪರ ಕೋರ್ಸ್ ಗಳ ಪ್ರವೇಶ ಪರೀಕ್ಷೆಯ ಮೊದಲ ದಿನ ಭೌತಶಾಸ್ತ್ರ ವಿಷಯದ ಪರೀಕ್ಷಾ ಕೇಂದ್ರಗಳಿಗೆ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾ-ರಿಗಳಾದ ರಿಷಿ ಆನಂದ ಅವರು ಭೇಟಿ ನೀಡಿ ಪರಿಶೀಲನೆ ನಡೆಸಿ, ಪರೀಕ್ಷಾ ಕೇಂದ್ರಗಳ ವ್ಯವಸ್ಥೆಗಳನ್ನು ಸಮಗ್ರವಾಗಿ ಅವಲೋಕಿಸಿದರು.

ಪರೀಕ್ಷಾರ್ಥಿಗಳಿಗೆ ಕಲ್ಪಿಸಲಾದ ಕುಡಿಯುವ ನೀರು, ಸಮರ್ಪಕ ಬೆಳಕು ಮತ್ತು ಗಾಳಿ ವ್ಯವಸ್ಥೆ, ಆಸನದ ವ್ಯವಸ್ಥೆ ಸೇರಿದಂತೆ ಮೂಲಭೂತ ಸೌಲಭ್ಯಗಳನ್ನು ನಿಖರವಾಗಿ ಪರಿಶೀಲಿಸಿದರು. ಪರೀಕ್ಷಾ ಕೇಂದ್ರಗಳಲ್ಲಿ ಮೇಲ್ವಿಚಾರಕರು ಕಟ್ಟುನಿಟ್ಟಾಗಿ ಕರ್ತವ್ಯ ನಿರ್ವಹಿಸುತ್ತಿರುವುದು, ಅಭ್ಯರ್ಥಿಗಳು ನಿಯಮಾನುಸಾರ ಪರೀಕ್ಷೆಗೆ ಹಾಜರಾಗಿರುವುದು ಹಾಗೂ ಯಾವುದೇ ಲೋಪಗಳಿಗೆ ಅವಕಾಶ ಇಲ್ಲದಂತೆ ಕ್ರಮ ಕೈಗೊಳ್ಳಲಾಗಿದೆ ಎಂಬುದನ್ನು ಅವರು ಖಚಿತಪಡಿಸಿಕೊಂಡರು.

ಸಿಸಿಟಿವಿ ನಿಗಾ ವ್ಯವಸ್ಥೆ, ಪ್ರವೇಶ ದ್ವಾರಗಳಲ್ಲಿ ಭದ್ರತಾ ತಪಾಸಣೆ ಹಾಗೂ ಪೊಲೀಸ್ ಬಂದೋಬಸ್ತ್‌ಗಳ ಕುರಿತು ಮಾಹಿತಿ ಪಡೆದು,ವ್ಯವಸ್ಥೆಗಳ ಕುರಿತು ಮೆಚ್ಚುಗೆ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಭೌತಶಾಸ್ತ್ರ ಪ್ರಮುಖ ವಿಷಯದ ಪರೀಕ್ಷೆಗಳು ವಿದ್ಯಾರ್ಥಿಗಳ ಭವಿಷ್ಯಕ್ಕೆ ದಿಕ್ಕು ತೋರಿಸುವಂತಿವೆ. ಆದ್ದರಿಂದ ಪರೀಕ್ಷೆಗಳು ಸಂಪೂರ್ಣ ಪಾರದರ್ಶಕವಾಗಿ, ನ್ಯಾಯಬದ್ಧವಾಗಿ ಮತ್ತು ಯಾವುದೇ ಅಡಚಣೆಗಳಿಲ್ಲದೆ ನಡೆಯಬೇಕು ಎಂದ ಅವರು, ಅಧಿಕಾರಿಗಳು ಹೆಚ್ಚಿನ ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದು ಸೂಚಿಸಿದರು.



ಈ ಸಂದರ್ಭದಲ್ಲಿ ಸಂಬಂಧಿತ ಇಲಾಖೆಗಳ ಅಧಿಕಾ-ರಿಗಳು, ಪರೀಕ್ಷಾ ಕೇಂದ್ರಗಳ ಅಧೀಕ್ಷಕರು ಹಾಗೂ ಸಿಬ್ಬಂದಿಗಳು ಉಪಸ್ಥಿತರಿದ್ದು, ಪರೀಕ್ಷಾ ಪ್ರಗತಿ ಹಾಗೂ ಕೈಗೊಳ್ಳಲಾಗಿರುವ ವ್ಯವಸ್ಥೆಗಳ ಕುರಿತು ವಿವರಿಸಿದರು.




### ಹಿರೇಬೇವನೂರ ಗ್ರಾಮದಲ್ಲಿ 1.25 ಕೋಟಿ ರೂ ವೆಚ್ಚದ ಶಾದಿ ಮಹಲ್ ಕಟ್ಟಡ ಲೋಕಾರ್ಪಣೆಗೊಳಿಸಿದ ಶಾಸಕ ಯಶವಂತರಾಯಗೌಡ ಅಭಿಮತ

# ಇಂಡಿ ತಾಲೂಕು ಅಭಿವೃದ್ಧಿಗೆ ಮುಖ್ಯಮಂತ್ರಿಗಳ ಕೊಡುಗೆ ಅಪಾರ

■ ಉದಯರಶ್ಮಿ ದಿನಪತ್ರಿಕೆ

ಇಂಡಿ: ಮುಸ್ಲಿಂ ಸಮಾಜದ ಬಡ ಜನತೆಗೆ ಮದುವೆ ಮತ್ತಿತರ ಕಾರ್ಯಗಳನ್ನು ನಡೆಸಲು ಶಾದಿಮಹಲ ಕಟ್ಟಲಾಗಿದ್ದು ಸದುಪಯೋಗ ಪಡೆದುಕೊಳ್ಳಲು ಶಾಸಕ ಯಶವಂತರಾಯಗೌಡ ಪಾಟೀಲ ಹೇಳಿದರು.

ತಾಲೂಕಿನ ಹಿರೇಬೇವನೂರ ಗ್ರಾಮದ ಸಕ್ಕರೆ ಕಾರ್ಖಾನೆ ಹತ್ತಿರ ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆ ಹಾಗೂ ಅಂಜುಮನ ಇಸ್ಲಾಂ ಸಮಿತಿ ಇವರಿಂದ ನಿರ್ಮಿಸಲಾದ ಒಂದು ಕೋಟಿ 25 ಲಕ್ಷ ರೂ ವೆಚ್ಚದ ಶಾದಿ ಮಹಲ್ ಕಟ್ಟಡವನ್ನು ಲೋಕಾರ್ಪಣೆಗೊಳಿಸಿ ಮಾತನಾಡಿದರು. ಅಲ್ಪ ಸಂಖ್ಯಾತರ ಮದುವೆ ಹಾಗೂ ಸಮುದಾಯದ ಕಾರ್ಯಕ್ರಮಗಳ ಉದ್ದೇಶಕ್ಕಾಗಿ ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಗೆ ಮುಖ್ಯಮಂತ್ರಿಗಳು ಸಾಕಷ್ಟು ಅನುದಾನವನ್ನು ನೀಡಿದ್ದು ಇಂಡಿ ತಾಲೂಕಿನ ಅಭಿವೃದ್ದಿಗೆ ಮುಖ್ಯಮಂತ್ರಿಗಳ ಕೊಡುಗೆ ಅಪಾರವಾಗಿದೆ ಎಂದರು.

ಅಧ್ಯಕ್ಷತೆ ವಹಿಸಿದ ಮೌಲಾನಾ ಶಾಕಿರ ಹುಸೇನ ಖಾಸ್ಮಿ ಮಾತನಾಡಿ ಹಿಂದು ಮುಸ್ಲಿಂ ಬಾಂಧವರು ಈ ನೆಲದಲ್ಲಿ ಅನ್ಯೋನತೆಯಿಂದ ಸಹೋದರತ್ವದಿಂದ ಬಾಳೋಣ ಎಂದರು. ಸಾನಿದ್ಯ ವಹಿಸಿದ ದೇವಾನಂದ ಹಿರೇಮಠ, ಬ್ಲಾಕ್ ಕಾಂಗ್ರೆಸ್ ಮಾಜಿ ಅಧ್ಯಕ್ಷ ಜಾವೇದ ಮೋಮಿನ, ಶಾಕಿರ ಮುಲ್ಲಾ ಸಾನಿದ್ಯ ವಹಿಸಿ ಮಾತನಾಡಿದರು.

ನಿಂಬೆ ಅಭಿವೃದ್ದಿ ಮಂಡಳಿ ಅಧ್ಯಕ್ಷ ಭೀಮಣ್ಣ ಕವಲಗಿ, ಅಲ್ಪ ಸಂಖ್ಯಾತರ ಇಲಾಖೆಯ ಉಪನಿರ್ದೇಶಕ ಪ್ರಶಾಂತ ಪೂಜಾರಿ, ಇಲಿಯಾಸ ಬೋರಾಮಣಿ, ಬಿ.ಕೆ.ಪಾಟೀಲ, ಪ್ರಶಾಂತ ಕಾಳೆ, ಕಜಾಪ ಅಧ್ಯಕ್ಷ ಆರ್.ವಿ.ಪಾಟೀಲ , ಸತ್ತಾರ ಬಾಗವಾನ, ನಾಗಪ್ಪಗೌಡ ಬಿರಾದಾರ, ಸಂಗಪ್ಪ ಉಪ್ಪಿನ, ಬಸಪ್ಪ ಸೋಲಾಪುರ, ರಮಜಾನ ಮಕಾನದಾರ, ಚಾಂದ ಶೇಖ, ಚಾಂದಸಾಬ ಮೋಮಿನ, ಮೂಬೂಬ ಮುಜಾವರ, ಮಹಮ್ಮದ ಹನೀಫ ಜಾಲೆಗಾರ, ಅಣ್ಣಾರಾಯ ಬಮ್ಮನಳ್ಳಿ ಮತ್ತಿತರಿದ್ದರು.

### ಜಿಲ್ಲೆಯ ಆಕ್ಸಫರ್ಡ್ ಶಾಲೆಯ ಸೌಜನ್ಯಾ ರಾಜ್ಯ, ಜಿಲ್ಲೆಗೆ ಪ್ರಥಮ । ಫಲಿತಾಂಶದಲ್ಲಿ ಗಣನೀಯ ಸುಧಾರಣೆ

# ಎಸ್ಸೆಸ್ಸೆಲ್ಸಿಯಲ್ಲಿ ವಿಜಯಪುರ ಜಿಲ್ಲೆಯ ಫಲಿತಾಂಶ ಶೇ.94.16

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಪ್ರಸಕ್ತ ಸಾಲಿನ ಎಸ್ಸೆಸ್ಸೆಲ್ಸಿ ಪರೀಕ್ಷಾ ಫಲಿತಾಂಶ ಶೇ.94.16 ರಷ್ಟಾಗಿದ್ದು, ಜಿಲ್ಲೆ, ಈ ಬಾರಿ ರಾಜ್ಯ ಮಟ್ಟದಲ್ಲಿ ಫಲಿತಾಂಶದಲ್ಲಿ ಗಣನೀಯ ಸುಧಾರಣೆ ಕಂಡಿದೆ. ಈ ಬಾರಿ ಜಿಲ್ಲೆಯ ಫಲಿತಾಂಶ ಶೇ. 94.16 ರಷ್ಟಾಗುವ ಮೂಲಕ ಉತ್ತಮ ಸಾಧನೆ ಮಾಡಿದೆ. ಪ್ರಸಕ್ತ ಸಾಲಿನಲ್ಲಿ ಒಟ್ಟು 38423 ಮಕ್ಕಳ ಪೈಕಿ 36180 ಮಕ್ಕಳು ಉತ್ತೀರ್ಣರಾಗುವ ಮೂಲಕ ಸಾಧನೆ ಮಾಡಿದ್ದಾರೆ. ಈ ವರ್ಷದ ಫಲಿತಾಂಶದಲ್ಲಿ ಗಣನೀಯ ಹೆಚ್ಚಳವಾಗಿದೆ.

ಸೌಜನ್ಯಾ ರಾಜ್ಯ, ಜಿಲ್ಲೆಗೆ ಪ್ರಥಮ: ಜಿಲ್ಲೆಯ ಮುದ್ದೇಬಿಹಾಳ ತಾಲೂಕಿನ ನಾಗರಬೆಟ್ಟ ಆಕ್ಸಫರ್ಡ್ ಆಂಗ್ಲ ಮಾಧ್ಯಮ ಪ್ರೌಢಶಾಲೆಯ ಸೌಜನ್ಯಾ ಬಸವರಾಜ ಕಂದಕೂರ 625ಕ್ಕೆ 625 ಅಂಕ ಗಳಿಸುವ ಮೂಲಕ ರಾಜ್ಯ ಕ್ಕೆ ಪ್ರಥಮ ಸ್ಥಾನ ಪಡೆದ 7 ಮಕ್ಕಳ ಪೈಕಿ ಒಬ್ಬರಾಗಿದ್ದು, ತನ್ಮೂಲಕ ರಾಜ್ಯ ಹಾಗೂ ಮತ್ತು ವಿಜಯಪುರ ಜಿಲ್ಲೆಗೆ ಪ್ರಥಮ ಸ್ಥಾನ ಪಡೆದಿದ್ದಾರೆ ಎಂದು ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ವೀರಯ್ಯ ಸಾಲಿಮಠ ತಿಳಿಸಿದ್ದಾರೆ.

ನಾಗರಬೆಟ್ಟದ ಪಾಟೀಲ ಕನ್ನಡ ಮಾಧ್ಯಮ ಪ್ರೌಢಶಾಲೆಯ ನೇಹಾ ಪ್ರಭುಗೌಡ ಗುರಡ್ಡಿ 625ಕ್ಕೆ 624 ಅಂಕ ಪಡೆದು ಜಿಲ್ಲೆಗೆ ದ್ವಿತೀಯ ಸ್ಥಾನ ಪಡೆದರೆ, ನಾಗರಬೆಟ್ಟದ ಎಸ್‌ಡಿಕೆ ಪ್ರೌಢಶಾಲೆಯ ಪೂಜಾ ಎಚ್. ಲಮಾಣಿ ಕನ್ನಡ ಮಾಧ್ಯಮದಲ್ಲಿ ಶೇ.99.84 ಅಂಕ ಪಡೆದು ಜಿಲ್ಲೆಗೆ ದ್ವಿತೀಯ, ಆಕ್ಸಫರ್ಡ್ ಆಂಗ್ಲ ಮಾಧ್ಯಮ ಪ್ರೌಢಶಾಲೆಯ ಜ್ಯೋತ್ಸ್ನಾ ಬಾಲಚಂದ್ರ ಪಾಟೀಲ ಶೇ.99.68 ಅಂಕ ಪಡೆದು ಜಿಲ್ಲೆಗೆ ತೃತೀಯ ಸ್ಥಾನ ಪಡೆದಿದ್ದಾರೆ. ಇವರೊಟ್ಟಿಗೆ ಮುದ್ದೇಬಿಹಾಳ ತಾಲೂಕಿನ ಮೈಲೇಶ್ವರ ಗ್ರಾಮದ ಬ್ರಿಲ್ಲಿಯಂಟ್ ಆಂಗ್ಲ ಮಾಧ್ಯಮ ಪ್ರೌಢಶಾಲೆಯ ಗಂಗಮ್ಮ ಅಶೋಕ ಕೋಳೂರ ಶೇ.99.68 ಅಂಕ ಹಾಗೂ ಜಿಲ್ಲೆಯ ಬೇಳೂರು ಕ್ರಾಸ್ ಜೆಎಸ್ಸೆಸ್ ಆಂಗ್ಲ ಮಾಧ್ಯಮ ಪ್ರೌಢಶಾಲೆಯ ಸುಪರ್ಣಿಕಾ ಸಂಗನಗೌಡ ಪಾಟೀಲ ಶೇ. 99.68 ಅಂಕ ಪಡೆದು ಜಿಲ್ಲೆಗೆ ತೃತೀಯ ಸ್ಥಾನ ಪಡೆದುಕೊಂಡಿದ್ದಾರೆ ಎಂದು ಡಿಡಿಪಿಐ ವೀರಯ್ಯ ಸಾಲಿಮಠ ತಿಳಿಸಿದ್ದಾರೆ.

### ಪುಣೆಯ ಬಸವ ತಿಳುವಳಿಕೆ & ಸಂಶೋಧನೆ ಕೇಂದ್ರದ ಅಧ್ಯಕ್ಷ ಡಾ.ಶಶಿಕಾಂತ ಪಟ್ಟಣ & ಪದಾಧಿಕಾರಿಗಳಿಂದ ಒಕ್ಕೊರಲಿನ ಆಗ್ರಹ

# ಮಹಿಳಾ ವಿವಿಯಲ್ಲಿರುವ ಅಕ್ಕಮಹಾದೇವಿ ಅರೆಬೆತ್ತಲೆ ಪ್ರತಿಮೆ ತೆರವಿಗೆ ಆಗ್ರಹ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ನಗರದ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದಲ್ಲಿ ಅಕ್ಕ ಮಹಾದೇವಿಯ ಅರೆಬೆತ್ತಲೆ ಪ್ರತಿಮೆ ಸ್ಥಾಪನೆ ಮಾಡಿರುವುದು ಸ್ತ್ರೀ ಕುಲಕ್ಕೆ ಅಗೌರವ, ಕೂಡಲೇ ಆ ಪ್ರತಿಮೆ ತೆರವುಗೊಳಿಸಿ, ಗೌರವ ತರುವ ರೀತಿಯಲ್ಲಿ ಅಕ್ಕಮಹಾದೇವಿ ಪ್ರತಿಮೆ ಸ್ಥಾಪಿಸಬೇಕು ಎಂದು ಪುಣೆಯ ಬಸವ ತಿಳುವಳಿಕೆ ಮತ್ತು ಸಂಶೋಧನಾ ಕೇಂದ್ರದ ಅಧ್ಯಕ್ಷ ಡಾ.ಶಶಿಕಾಂತ ಪಟ್ಟಣ ಆಗ್ರಹಿಸಿದರು.

ಗುರುವಾರ ನಗರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು,

ಅಕ್ಕ ಮಹಾದೇವಿ ಬಟ್ಟೆಯನ್ನು ಉಡುವುದನ್ನು ಬಿಟ್ಟಿರಲೇ ಇಲ್ಲ, ಕೆಲವು ಸನಾತನಿಗಳ ಕುತಂತ್ರದಿಂದ ಅಕ್ಕಮಹಾದೇವಿ ಗೌರವಕ್ಕೆ ಚ್ಯುತಿ ಬರುವ ಕೆಲಸ ಮಾಡುತ್ತಿದೆ, ಹೀಗಾಗಿ ಕೂಡಲೇ ಅಕ್ಕಮಹಾದೇವಿ ಮಹಿಳಾ ವಿವಿ ಆವರಣದಲ್ಲಿರುವ ಪ್ರತಿಮೆಯನ್ನು ಸ್ಥಳಾಂತರಿಸಿ ಹೊಸ ಪ್ರತಿಮೆ ಸ್ಥಾಪಿಸಿ ಎಂದು ಒತ್ತಾಯಿಸಿದರು.

ಬಸವ ಜನ್ಮ ಭೂಮಿಯಲ್ಲಿರುವ ಅಕ್ಕಮಹಾದೇವಿ ಮಹಿಳಾ ವಿವಿಯಲ್ಲಿಯೇ ಬಸವ ಅಧ್ಯಯನ ಪೀಠ ಇಲ್ಲದಿರುವುದು ನೋವಿನ ಸಂಗತಿ, ಅನೇಕ ಬಾರಿ ಮನವಿ ಸಲ್ಲಿಸಿದರೂ ಸಹ ಸರ್ಕಾರ ಈ ನಿಟ್ಟಿನಲ್ಲಿ ಶೇ.1 ರಷ್ಟು ಸಹ ದಿಟ್ಟ ಹೆಜ್ಜೆ ಇರಿಸಿಲ್ಲ ಎಂದು ಡಾ.ಪಟ್ಟಣ ಅಸಮಾಧಾನ ವ್ಯಕ್ತಪಡಿಸಿದರು.

ಈ ವಿಷಯವಾಗಿ ಹೋರಾಟ ನಡೆಸಿದರೂ ಸಹ ಆ ಸಮಯದಲ್ಲಿ ನಮ್ಮ ಹೋರಾಟವನ್ನು ದಮನಗೊಳಿಸುವ ಕಾರ್ಯ ನಡೆಯುತ್ತಿದೆ, ಜೇಡರ ದಾಸಿಮಯ್ಯ ಹಾಗೂ ದೇವರ ದಾಸಿಮಯ್ಯ ಬೇರೆ, ಆದರೆ ಇತ್ತೀಚಿಗೆ ಶರಣ-ರ ವಿಷಯದಲ್ಲಿಯೂ ತಪ್ಪು ಕಲ್ಪನೆ ಬಿತ್ತುವ ಕೆಲಸ ನಡೆಯುತ್ತಿದೆ, ವಚನ ಸಾಹಿತ್ಯದಲ್ಲಿ ಕೆಲವು ವಿನಾಕಾರಣ ಕೆಲವು ಶಬ್ದ ಸೇರಿಸಿ ಅವುಗಳ ತಾತ್ಪರ್ಯ ತಿದ್ದುವ ಕೆಲಸ ನಡೆಯುತ್ತಿದೆ, ಇದು ಸಂಪೂರ್ಣ ನಿಲ್ಲಬೇಕಿದೆ. ಹೀಗಾಗಿ ವಚನ ಪರಿಷ್ಕರಣೆ ಹಾಗೂ ಶುದ್ಧೀಕರಣ ನಡೆಯಬೇಕು ಎಂದರು. ಮಠಗಳ ಓಲೈಕೆಗಾಗಿ ಶರಣರ ಜಯಂತಿ ನಡೆಯುತ್ತಿದೆ, ಆದರೆ ಶರಣರಿಗೆ ಗೌರವ ನೀಡುವ ಅರ್ಥಪೂರ್ಣ ಕೆಲಸ ಆಗುತ್ತಿಲ್ಲ ಎಂದು ಡಾ.ಪಟ್ಟಣ ವಿಷಾದಿಸಿದರು. ಸುದ್ದಿಗೋಷ್ಠಿಯಲ್ಲಿ ಡಾ.ಸರಸ್ವತಿ ಪಾಟೀಲ, ರೇಣುಕಾ ಪಾಟೀಲ, ಆರ್.ಎಸ್. ಬಿರಾದಾರ, ರತ್ನಕ್ಕ ಬಿರಾದಾರ, ಸಿದ್ದಪ್ಪ ಪಡನಾಡ, ಪ್ರಮುಖರಾದ ಗಂಗಾಧರ ಸಾಲಕ್ಕಿ, ಶರಣು ಸಬರದ, ಡಾ.ಶಾರದಾಮಣಿ ಹುಣಶ್ಯಾಳ ಸೇರಿದಂತೆ ಹಲವರು ಪಾಲ್ಗೊಂಡಿದ್ದರು.



## ಲಿಂಗಾಯತರಿಗೆ ಅಲ್ಪಸಂಖ್ಯಾತ ಸ್ಥಾನಮಾನ ನೀಡಿ



ಜೈನ ಧರ್ಮಕ್ಕೆ ಪ್ರತ್ಯೇಕ ಧರ್ಮ ಸ್ಥಾನಮಾನ ದೊರಕುವ ಮುನ್ನವೂ ಸಹ ಕೆಲವು ರಾಜ್ಯಗಳಲ್ಲಿ ಅದಕ್ಕೆ ಅಲ್ಪಸಂಖ್ಯಾತ ಸ್ಥಾನಮಾನ ನೀಡಲಾಗಿತ್ತು, ಹೀಗಾಗಿ ರಾಜ್ಯದಲ್ಲಿಯೂ ಲಿಂಗಾಯತರಿಗೆ ಅಲ್ಪಸಂಖ್ಯಾತ ಸ್ಥಾನಮಾನ ನೀಡುವ ನಿಟ್ಟಿನಲ್ಲಿ ಸರ್ಕಾರ ಮೀನಮೇಷ ಎಣಿಸಬಾರದು ಎಂದು ಡಾ.ಶಶಿಕಾಂತ ಪಟ್ಟಣ ಒತ್ತಾಯಿಸಿ ದರು

## 20 ಜನ ಸಾಧಕರಿಗೆ ಪ್ರಶಸ್ತಿ ಪ್ರದಾನ

ನಗರದಲ್ಲಿ ಏ.25 ರಂದು ನಡೆಯಲಿರುವ ಬಸವ ಜಯಂತಿ ಕಾರ್ಯಕ್ರಮದಲ್ಲಿ ಒಟ್ಟು 20 ಜನ ಸಾಧಕ ಶರಣ-ಶರಣೆಯರಿಗೆ ಪ್ರಶಸ್ತಿ ಪ್ರದಾನ ಮಾಡಲಾಗುತ್ತದೆ. 8 ಜನ ಶರಣೆಯರಿಗೆ ಕ್ರಾಂತಿ ಗಂಗೋತ್ರಿ ಅಕ್ಕನಾಗಮ್ಮ ಪ್ರಶಸ್ತಿ, 4 ಜನರಿಗೆ ವಚನ ಗಾನ ಕೋಗಿಲೆ ಪ್ರಶಸ್ತಿ ಹಾಗೂ 8 ಜನ ಬಸವ ಸೇವಾ ಪ್ರಶಸ್ತಿ ಪ್ರದಾನ ಸಹ ನಡೆಯಲಿದೆ ಎಂದು ಡಾ.ಪಟ್ಟಣ ವಿವರಿಸಿದರು.

## ಏ.25 ರಂದು ಬಸವ ಜಯಂತಿ ಕಾರ್ಯಕ್ರಮ

ಬಸವ ತಿಳಿವಳಿಕೆ ಹಾಗೂ ಸಂಶೋಧನಾ ಕೇಂದ್ರದ ವತಿಯಿಂದ ಇದೇ ದಿ.25 ರಂದು ವಿಜಯಪುರದ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಮಂಗಲ ಕಾರ್ಯಾಲಯದಲ್ಲಿ ಬೆಳಿಗ್ಗೆ 10 ಕ್ಕೆ ಬಸವ ಜಯಂತಿ ಹಮ್ಮಿಕೊಳ್ಳಲಾಗಿದೆ ಎಂದು ಡಾ.ಶಶಿಕಾಂತ ಪಟ್ಟಣ ಹೇಳಿದರು.

ವಿಜಯಪುರದ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ.ಗಂಗಾಧರ್ ಸಂಬಣ್ಣಿ ಕಾರ್ಯಕ್ರಮ ಉದ್ಘಾಟಿಸಲಿದ್ದು, ಡಾ.ಅಜಿತ್ ರಾಂಪುರೆ ಮುಖ್ಯ ಕಾರ್ಯನಿರ್ವಾಹಕರು ಮತ್ತು ಡೀನ್ ಅರೆಯುಸ್ ವಿಶ್ವವಿದ್ಯಾಲಯ ಅರೋಬಾ ಇವರು ಮುಖ್ಯ ಅತಿಥಿ ಸ್ಥಾನವನ್ನು ಅಲಂಕರಿಸಲಿದ್ದಾರೆ.

ಇದೆ ಸಂಧರ್ಭದಲ್ಲಿ ಡಾ.ಅಶೋಕ ಆಲೂರ , ಕುಲಪತಿಗಳು, ಕೊಡಗು ವಿಶ್ವವಿದ್ಯಾಲಯ ಇವರು 'ಬಸವ ತತ್ವ ಜಗದ ತತ್ವ ' ಎಂಬ ವಿಷಯ ಕುರಿತು ಅನುಭಾವ ನೀಡಲಿದ್ದಾರೆ.

ಡಾ.ಶಶಿಕಾಂತ ಪಟ್ಟಣ, ಅಧ್ಯಕ್ಷರು, ಬಸವ ತಿಳುವಳಿಕೆ ಮತ್ತು ಸಂಶೋಧನಾ ಕೇಂದ್ರ, ಪುಣೆ ಇವರು ಅಧ್ಯಕ್ಷ ಸ್ಥಾನ ವಹಿಸಲಿದ್ದು, ಗೌರವ ಉಪಸ್ಥಿತರಾಗಿ ಡಾ.ಮಹಾಂತೇಶ ಬಿರಾದಾರ, ಬಿಎಲ್ಡಿಇ ಸಂಸ್ಥೆ ಸಂಪರ್ಕ ಅಧಿಕಾರಿಗಳು, ಸುರೇಶ ದೇಸಾಯಿ ಪ್ರಥಮ ದರ್ಜೆ ಗುತ್ತಿಗೆದಾರರು ಅಧ್ಯಕ್ಷರು. ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಸಂಸ್ಥೆ, ವಿಜಯಪುರ, ಪ್ರೊ.ಶಾರದಾ ಪಾಟೀಲ (ಮೇಟಿ) ವಿಶ್ವಸ್ಥರು, ಬಸವ ತಿಳುವಳಿಕೆ ಸಂಶೋಧನಾ ಕೇಂದ್ರ, ಪುಣೆ, ಡಾ.ಸರಸ್ವತಿ ಪಾಟೀಲ, ಗೌರವಾಧ್ಯಕ್ಷರು, ಬಸವ ತಿಳುವಳಿಕೆ ಸಂಶೋಧನಾ ಕೇಂದ್ರ ವಿಜಯಪುರ ಜಿಲ್ಲಾ ಘಟಕ, ಶರಣೆ ವಿಜಯಲಕ್ಷ್ಮೀ ಹಂಗರಗಿ, ಯಾದಗಿರಿ ಜಿಲ್ಲಾಧ್ಯಕ್ಷರು ಇವರು ಆಗಮಿಸಲಿದ್ದಾರೆ ಎಂದು ಡಾ.ಪಟ್ಟಣ ವಿವರಿಸಿದರು.

## ಮೈಸೂರು ಜಿಲ್ಲೆಗೇ ಹೆಚ್.ಡಿ.ಕೋಟೆ ತಾಲೂಕು ಮೊದಲನೇ ಸ್ಥಾನ | ಆದರ್ಶ ಶಾಲೆ ವಿದ್ಯಾರ್ಥಿನಿ ವೇದಶ್ರೀ ಟಾಪರ್

# ಎಸ್ಸೆಸ್ಸೆಲ್ಸಿ ಫಲಿತಾಂಶದಲ್ಲಿ ಇತಿಹಾಸ ಬರೆದ ಹೆಚ್.ಡಿ.ಕೋಟೆ ತಾಲೂಕು

■ **ಉದಯರಶ್ಮಿ ದಿನಪತ್ರಿಕೆ**

ಹೆಚ್ ಡಿ.ಕೋಟೆ: ಈ ಬಾರಿಯ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಯ ಫಲಿತಾಂಶದಲ್ಲಿ ಹೆಚ್.ಡಿ.ಕೋಟೆ ತಾಲೂಕು ಇತಿಹಾಸ ಸೃಷ್ಟಿಸಿದೆ. ಇದೇ ಮೊದಲ ಬಾರಿಗೆ ತಾಲೂಕು ಶೇ. 96.80 ಫಲಿತಾಂಶದೊಂದಿಗೆ ಮೈಸೂರು ಜಿಲ್ಲೆಯಲ್ಲೆ ಪ್ರಥಮ ಸ್ಥಾನಗಳಿಸಿದೆ. ಈ ಮೂಲಕ ಕ್ಷೇತ್ರ ಶಿಕ್ಷಣಾಧಿಕಾರಿ ತೆಗೆದುಕೊಂಡಿದ್ದ ವಿನೂತನ ಪ್ರಯೋಗ ಸಕ್ಸಸ್ ಕಂಡಿದೆ.

ಮಾ.18ರಿಂದ ಏ.2ರವರೆಗೆ ನಡೆದ ವಾರ್ಷಿಕ ಪರೀಕ್ಷೆಯಲ್ಲಿ 31 ಪ್ರೌಢಶಾಲೆ, 23 ಖಾಸಗಿ ಹಾಗೂ 4 ವಸತಿ ಶಾಲೆಗಳಿಂದ ಒಟ್ಟು 3369 ವಿದ್ಯಾರ್ಥಿಗಳು ಪರೀಕ್ಷೆಗೆ ನೋಂದಾಯಿಸಿಕೊಂಡಿದ್ದರು. ಹೆಚ್.ಡಿ.ಕೋಟೆ ಪಟ್ಟಣ , ಸರಗೂರು, ಹ್ಯಾಂಡ್ ಪೋಸ್ಟ್, ಡಿ.ಬಿ.ಕುಪ್ಪೆ, ಹೊಮ್ಮರಗಳ್ಳಿ, ಅಂತರಸಂತೆ, ಮಾದಾಪುರ, ಬೀಚನಹಳ್ಳಿ, ಮುಳ್ಳೂರು, ಬಿ.ಮಟಕೆರೆ ಸೇರಿದಂತೆ ಹದಿಮೂರು ಕೇಂದ್ರಗಳಲ್ಲಿ ಪರೀಕ್ಷೆ ನಡೆಸಲಾಗಿತ್ತು.

2,971 ವಿದ್ಯಾರ್ಥಿಗಳು, ಮಾತ್ರ ಪರೀಕ್ಷೆಗೆ ಹಾಜರಾಗಿದ್ದರು. ಇದರಲ್ಲಿ 2,876 ವಿದ್ಯಾರ್ಥಿಗಳು ತೇರ್ಗಡೆ ಹೊಂದಿದ್ದರೆ 95 ವಿದ್ಯಾರ್ಥಿಗಳು ಅನುತ್ತೀರ್ಣರಾಗಿದ್ದಾರೆ.

ಪಿ.ಎಂ. ಶ್ರೀ ಸರ್ಕಾರಿ ಆದರ್ಶ ವಿದ್ಯಾಲಯದ ವೇದಶ್ರೀ 625ಕ್ಕೆ 618 ಅಂಕಗಳನ್ನು ಪಡೆದು ತಾಲೂಕಿಗೆ ಪ್ರಥಮ ಸ್ಥಾನ ಬಂದಿದ್ದಾರೆ. ಪಿ.ಎಂ. ಶ್ರೀ ಸರ್ಕಾರಿ ಆದ–ರ್ಶ ವಿದ್ಯಾಲಯದ ಮತ್ತೊಬ್ಬ ವಿದ್ಯಾರ್ಥಿನಿ ಲಿಖಿತಾ ಮತ್ತು ಏಕಲವ್ಯ ವಿದ್ಯಾ ಶಾಲೆಯ ಆದಿತ್ಯಾ 625ಕ್ಕೆ 614 ಅಂಕಗಳನ್ನು ಪಡೆದು ತಾಲೂಕಿಗೆ ಎರಡನೇ ಸ್ಥಾನ ಬಂದಿದ್ದಾರೆ. ಸೇಂಟ್ ಮೇರಿಸ್ ಕಾನ್ವೆಂಟ್ ಪ್ರೌಢಶಾಲೆಯ ದರ್ಶಿನಿ ಮೂರನೇ ಸ್ಥಾನ ಪಡೆದಿದ್ದಾರೆ.

28 ವಿದ್ಯಾರ್ಥಿಗಳು ಪ್ರಥಮ ಭಾಷೆ ಕನ್ನಡದಲ್ಲಿ 125ಕ್ಕೆ 125 ಅಂಕಗಳನ್ನು ಪಡೆದು ಸಾಧನೆ ಮಾಡಿದ್ದಾರೆ. 600ಕ್ಕಿಂತ ಹೆಚ್ಚಿನ ಅಂಕಗಳನ್ನು 28 ವಿದ್ಯಾರ್ಥಿಗಳು ಪಡೆದಿದ್ದಾರೆ. ವಿದ್ಯಾರ್ಥಿ ಜೀವನದಲ್ಲಿ ನಿರ್ಣಾಯಕ ಮತ್ತು ಪ್ರಮುಖ ಘಟ್ಟ ಎನಿಸಿರುವ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಕಳೆದ ಎರಡು ವರ್ಷಗಳಿಂದ ತಾಲೂಕು ಕೊನೆಯ ಸ್ಥಾನದಲ್ಲಿದ್ದರಿಂದ, ಶಿಕ್ಷಣ ಇಲಾಖೆ, ಸಾರ್ವಜನಿಕರು ಹಾಗೂ ಶಿಕ್ಷಣಾಸಕ್ತರಿಂದ ವ್ಯಾಪಕ ಟೀಕೆಗೆ ಗುರಿಯಾಗಿತ್ತು. ಫಲಿತಾಂಶ ಸುಧಾರಿಸಲು ಮುಂದಾಗಿದ್ದ ಬಿಇಒ, ಶೈಕ್ಷಣಿಕ ವರ್ಷದ ಪ್ರಾರಂಭದಲ್ಲಿಯೇ ಪ್ರೌಢಶಾಲೆಯ ಮುಖ್ಯಶಿಕ್ಷಕರು ಹಾಗೂ ವಿಷಯವಾರು ಶಿಕ್ಷಕರಿಗೆ ಹಲವು ಕಾರ್ಯಾಗಾರಗಳನ್ನು ನಡೆಸಿದ್ದರು. ಅದರಲ್ಲಿ ನಾನು ಓದುತ್ತಿದ್ದೇನೆ ಎಂಬ ವಿನೂತನ ಕಾರ್ಯಕ್ರಮ ಹಮ್ಮಿಕೊಂಡು ವಿದ್ಯಾರ್ಥಿಗಳ ಮನೆ ಮನೆಗೆ ತೆರಳಿ ರಿಯಾಲಿಟಿ ಚೆಕ್ ನಡೆಸಿದ್ದರು. ಅಲ್ಲದೆ ಸರಿಯಾದ ಸಮಯಕ್ಕೆ ತರಗತಿಗೆ ಹಾಜರಾಗಬೇಕು ಎಂದು ಶಿಕ್ಷಕರಿಗೂ ಕೂಡ ಕ್ಷೇತ್ರ ಶಿಕ್ಷಣಾಧಿಕಾರಿ ಎಸ್ ಎನ್ ರಾಜು ತಾಕೀತು ಮಾಡಿದ್ದರು. ಈ ಎಲ್ಲದರ ಪರಿಣಾಮವಾಗಿ ಕಳೆದ ಸಾಲಿನಲ್ಲಿ ಕೊನೆ ಸ್ಥಾನದಲ್ಲಿದ್ದ ಹೆಚ್ ಡಿಕೋಟೆ ತಾಲೂಕು ಈ ಬಾರಿ ಮೈಸೂರು ಜಿಲ್ಲೆಗೆ ಪ್ರಥಮ ಸ್ಥಾನ ಪಡೆದಿದೆ.

ಬಾಯ್ಸ್ ಜೂನಿಯರ್ ಕಾಲೇಜು ಸರಗೂರು, ಕೆಂಚನಹಳ್ಳಿ, ಮುಳ್ಳೂರು, ಕಂಚಮಹಳ್ಳಿ, ಎಂ.ಸಿ.ತಳಲು, ದಡದಹಳ್ಳಿ, ಗಾಂಧೀನಗರ, ಜಿ.ಬಿ.ಸರಗೂರು, ಡಿ.ಬಿ.ಕುಪ್ಪೆ, ಅಂತರಸಂತೆ, ಇಟ್ನ, ಸೊಳ್ಳೇಪುರ ಸೇ–ರಿದಂತೆ ಕಂದಲಿಕೆ ಗ್ರಾಮದ ಸರ್ಕಾರಿ ಪ್ರೌಢಶಾಲೆಗಳು ಪೂರ್ಣ ಫಲಿತಾಂಶ ಪಡೆದಿವೆ. ಈ ಮೂಲಕ 13 ಸರ್ಕಾರಿ ಶಾಲೆಗಳಲ್ಲಿ ಪೂರ್ಣ ಫಲಿತಾಂಶ ಬಂದಿದೆ. ಅನುದಾನಿತ ಶಾಲೆಗಳಾದ ಮೇಟಿಕುಪ್ಪೆಯ ಜೆಎಸ್, ಎಚ್.ಡಿ.ಕೋಟೆ ಪಟ್ಟಣದ ಸೇಂಟ್ ಮೇರಿಸ್ ಶಾಲೆಗಳು ಪೂರ್ಣ ಫಲಿತಾಂಶ ಪಡೆದಿವೆ.

### ಶಾಸಕರಿಂದ ಸನ್ಮಾನ :ಸಹಾಯದ ಭರವಸೆ

ಫಲಿತಾಂಶ ಹೊರಬೀಳುತ್ತಿದ್ದಂತೆ ಶಾಸಕ ಅನಿಲ್ ಚಿಕ್ಕಮಾದು ಅವರು ತಾಲೂಕಿಗೆ ಪ್ರಥಮ ಸ್ಥಾನ ಪಡೆದಿರುವ ವೇದಶ್ರೀ ಅವರ ಹುಟ್ಟೂರು ಅಣ್ಣೂರು ಹೊಸಳ್ಳಿ ಮನೆಗೆ ತೆರಳಿ ಸನ್ಮಾನಿಸಿದರು. ಸಿಹಿ ತಿನಿಸಿ, ಶುಭಾಶಯ ಕೋ–ರಿದರು. ಮುಂದಿನ ವಿದ್ಯಾಭ್ಯಾಸಕ್ಕೆ ಸಕಲ ರೀತಿಯಲ್ಲೂ ಸಹಾಯ ಮಾಡೋದಾಗಿ ಭರವಸೆ ನೀಡಿದರು.

ಈ ವೇಳೆ ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯೆ ಭಾಗ್ಯಲಕ್ಷ್ಮಿ, ನಿಂಗರಾಜ್, ತಾಲೂಕು ಪಂಚಾಯಿತಿ ಮಾಜಿ ಸದಸ್ಯ ಎಚ್ ಟಿ ಗಿರಿಗೌಡ, ಜಿನ್ನಹಳ್ಳಿ ರಾಜನಾಯಕ, ಕ್ಯಾತನಹಳ್ಳಿ ನಾಗರಾಜು, ಮಹೇಶ್ ನಾಯಕ, ಹೊಸಳ್ಳಿ ಹೆಚ್ ಬಿ ಶಿವಕುಮಾರ್, ಸಹ ಶಿಕ್ಷಕರು ಸಂಘದ ಅಧ್ಯಕ್ಷ ಪ್ರಮೋದ್ ಕುಮಾರ್, ನಾರಾಯಣಸ್ವಾಮಿ, ಭೀಮಪ್ಪ, ಪ್ರಕಾಶ್, ನಾಗೇಂದ್ರ ಮುಖ್ಯ ಶಿಕ್ಷಕರು ರವೀಂದ್ರ ಬಾಬು, ಎಚ್ ಸಿ ವೇಕಟೇಶ್, ಸವಿತಾ, ಹೊಸಳ್ಳಿ ಆನಂದ, ಸ್ವಾಮಿ, ನಂಜನಾಯಕನಹಳ್ಳಿ ಮನು, ಸವಿತಾ ಸಮಾಜದ ಅಧ್ಯಕ್ಷ ರೇವಣ್ಣ, ವೆಂಕಟೇಶ್, ಕಬಿನಿ ಹೇಮಂತ್, ಸ್ವಾಮಿ ಶೆಟ್ಟಿ, ಚಿಕ್ಕಣ್ಣ ಶೆಟ್ಟಿ, ಸೇರಿದಂತೆ ಇನ್ನಿತರರು ಇದ್ದರು.



## ಏ.24ರಂದು ಡಾ.ರಾಜ್ ಕುಮಾರ್ ಜನ್ಮದಿನಾಚರಣೆ ಹಾಗೂ ಗೀತ ಗಾಯನ

■ **ಉದಯರಶ್ಮಿ ದಿನಪತ್ರಿಕೆ**



ವಿಜಯಪುರ: ಜಿಲ್ಲಾಡಳಿತ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಹಯೋಗದಲ್ಲಿ ವರನಟ ಡಾ. ರಾಜ್ ಕುಮಾರ್ ಅವರ ಜನ್ಮ ದಿನಾಚರಣೆ ಹಾಗೂ ಅವರ ಚಲನಚಿತ್ರ ಗೀತೆಗಳ ಗಾಯನ ಕಾರ್ಯಕ್ರಮವನ್ನು ಇದೇ ಶುಕ್ರವಾರ, ಏಪ್ರಿಲ್.24ರ ಬೆಳಿಗ್ಗೆ 9 ಗಂಟೆಗೆ ನಗರದ ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದಲ್ಲಿ ಆಯೋಜಿಸಲಾಗಿದೆ.

ಕಾರ್ಯಕ್ರಮವನ್ನುಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರಾದ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಂ.ಬಿ.ಪಾಟೀಲ ಅವರು ಉದ್ಘಾಟಿಸುವರು. ನಗರ ಶಾಸಕರಾದ ಬಸನಗೌಡ ಪಾಟೀಲ ಯತ್ನಾಳ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರಾದ ಶಿವಾನಂದ ಪಾಟೀಲ ಸೇರಿದಂತೆ ಶಾಸಕರು, ಸಂಸದರು ಸೇರಿದಂತೆ ಗಣ್ಯರು ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.ಪತ್ರಕರ್ತರಾದ ಅಶೋಕ ಯಡಳ್ಳಿ ಹಾಗೂ ಪರಶುರಾಮ ಭಾಸಗಿ ಅವರು ವಿಶೇಷ ಉಪನ್ಯಾಸ ನೀಡಲಿದ್ದಾರೆ.

ಈಕಾರ್ಯಕ್ರಮದಲ್ಲಿ ಡಾ.ರಾಜ್ ಕುಮಾರ್ ಅಭಿನಯದ ಚಲನಚಿತ್ರ ಗೀತೆಗಳ ಗಾಯನ ಏರ್ಪಡಿಸಿದ್ದು, ಆಸಕ್ತರು ಪಾಲ್ಗೊಳ್ಳಬಹುದಾಗಿದೆ. ಪ್ರಸ್ತುತಪಡಿಸುವ ಹಾಡುಗಳ ಮಾಹಿತಿಯನ್ನು ಮೊ: 9049499783 ಕರೆ ಮಾಡಿ ಹೆಸರು ನೋಂದಾಯಿಸಿಕೊಳ್ಳುವಂತೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕ ಅಮರೇಶ ದೊಡಮನಿ ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

## ಜಾನುವಾರುಗಳಿಗೆ ಕಾಲುಬಾಯಿ ಜ್ವರ ಲಸಿಕಾ ಅಭಿಯಾನಕ್ಕೆ ಚಾಲನೆ

■ **ಉದಯರಶ್ಮಿ ದಿನಪತ್ರಿಕೆ**



ಚಡಚಣ: ತಾಲೂಕಿನಲ್ಲಿ ಏಪ್ರಿಲ್ 23ರಿಂದ ಮೇ 22ರವರೆಗೆ 9ನೇ ಸುತ್ತಿನ ಉಚಿತ ಕಾಲುಬಾಯಿ (ಎಫ್ಎಮ್ಡಿ) ಜ್ವರ ಲಸಿಕಾ ಅಭಿಯಾನ ಹಮ್ಮಿಕೊಳ್ಳಲಾಗಿದ್ದು ತಾ.ಪಂ.ಕಾರ್ಯನಿರ್ವಾಹಕ ಅಧಿಕಾರಿ ಅಶೋಕಕುಮಾರ್ ರಾಠೋಡ ಅವರು 9ನೇ ಸುತ್ತಿನ ಲಸಿಕಾ ಅಭಿಯಾನದ ಭಿತ್ತಿಪತ್ರ ಬೀಡುಗೊಡೆಗೊಳಿಸಿದರು.

ತಾ.ಪಂ.ಸಭಾಂಗಣದಲ್ಲಿ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, 2026–27ನೇ ಸಾಲಿನ ರಾಷ್ಟ್ರೀಯ ಜಾನುವಾರು ರೋಗ ನಿಯಂತ್ರಣ ಕಾರ್ಯಕ್ರಮದಡಿ ಈ ಅಭಿಯಾನ ನಡೆಯುತ್ತಿದ್ದು, ರೈತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ತಮ್ಮ ಜಾನುವಾರುಗಳಿಗೆ ಲಸಿಕೆ ಹಾಕಿಸಿಕೊಳ್ಳುವ ಮೂಲಕ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ರೈತರಲ್ಲಿ ಮನವಿ ಮಾಡಿಕೊಂಡರು.

ಕಾಲುಬಾಯಿ ರೋಗವು ಎತ್ತು, ಹಸು, ಎಮ್ಮೆ ಸೇರಿದಂತೆ ಇತರೆ ಜಾನುವಾರುಗಳಲ್ಲಿ ಕಂಡುಬಂದರೆ ಜಾನುವಾರು ಮಾಲಿಕ–ರಿಗೆ ಆರ್ಥಿಕ ನಷ್ಟ ಉಂಟಾಗುತ್ತದೆ. ರೋಗದಿಂದ ಗುಣಮುಖವಾದ ನಂತರ ಗರ್ಭಧಾರಣೆಯಲ್ಲಿ ವಿಳಂಬವಾಗುವ ಸಾಧ್ಯತೆ ಇದ್ದು, ಹಾಲಿನ ಉತ್ಪಾದನೆಯಲ್ಲಿಯೂ ಕುಸಿತವಾಗುತ್ತದೆ ಎಂದರು, ಜಾನುವಾರಗಳ ಹಿತದೃಷ್ಟಿಯಿಂದ ಮೂರು ತಿಂಗಳಿಗಿಂತ ಮೇಲ್ಪಟ್ಟ ಎಲ್ಲಾ ಜಾನುವಾರುಗಳಿಗೆ ಲಸಿಕೆ ನೀಡುವುದು ಅತ್ಯಗತ್ಯವಾಗಿದೆ ಎಂದು ಹೇಳಿದರು.ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ಮುಖ್ಯ ಪಶುವೈದ್ಯಾಧಿಕಾರಿ ಡಾ. ಎಂ.ಎಸ್. ಗಂಗನಳ್ಳಿ ಮಾತನಾಡಿ, ಚಡಚಣ ತಾಲೂಕಿನಲ್ಲಿ ಒಟ್ಟು 29,062 ಜಾನುವಾರುಗಳಿಗೆ ಉಚಿತ ಲಸಿಕೆ ನೀಡುವ ಗುರಿ ಹೊಂದಲಾಗಿದ್ದು ಈ ಲಸಿಕೆಯನ್ನು ವರ್ಷಕ್ಕೆ ಎರಡು ಬಾರಿ ನೀಡಲಾಗುತ್ತಿದ್ದು, ಒಂದು ತಿಂಗಳ ಕಾಲ ನಡೆಯುವ ಈ ಅಭಿಯಾನದಲ್ಲಿ ಪ್ರತಿದಿನ ಬೆಳಗ್ಗೆ 8 ಗಂಟೆಯಿಂದ 10 ಗಂಟೆಯವರೆಗೆ ಲಸಿಕೆ ನೀಡಲಾಗುತ್ತದೆ ಎಂದು ಹೇಳಿದರು.

ಈ ಕಾರ್ಯಕ್ರಮ ಯಶಸ್ವಿಗಾಗಿ ವಿಶೇಷ ಲಸಿಕಾ ತಂಡಗಳನ್ನು ರಚಿಸಲಾಗಿದೆ ಎಂದರು.

ಈ ಸಂದರ್ಭದಲ್ಲಿ ಡಾ. ಪ್ರಮೋದ್ ಹೊರ್ತಿ, ಡಾ. ಸಂಗನಗೌಡ ಬಿರಾದಾರ, ಜಾನುವಾರು ಅಧಿಕಾರಿ ಅಶೋಕ ಮಾನೆ, ಪಶುವೈದ್ಯಕೀಯ ಪರೀವಿಕ್ಷಕ ರಾಕೇಶ್ ಬಿಜ್ಜುರ, ಸಹಾಯಕ ನಿರ್ದೇಶಕ ಎಸ್. ಆರ್. ಕೊಟ್ಟಲಗಿ ಹಾಗೂ ಯೋಜನಾಧಿಕಾರಿ ಗುರುಮೂರ್ತಿ ಭಾಸರಗಿ ಉಪಸ್ಥಿತರಿದ್ದರು.

## ಉದ್ಯೋಗ ರತ್ನ ಶ್ರಮಿಕ ಶಿವಯೋಗಿ ಡಾ.ನೀಲಕಂಠ ಕಲ್ಯಾಣಿ

### ಸಾವಿಲ್ಲದ ಶರಣರು

■ **ಉದಯರಶ್ಮಿ ದಿನಪತ್ರಿಕೆ**

ಭಾರತದ ಗ್ರಾಮೀಣ ಭಾಗದ ಅಪ್ಪಟ ದೇಸೀಯ ಪ್ರತಿಭೆಯು ಮುಂದೆ ರಾಷ್ಟ್ರದ ಅತ್ಯಂತ ಅಪರೂಪದ ಬೃಹತ್ ಕೈಗಾ–ರಿಕೆಯನ್ನು ಆರಂಭಿಸಲು ಮುಂದಾಗಿದ್ದು ಈ ಮಹಾನ್ ಕಾಯಕಯೋಗಿ ಡಾ ನೀಲಕಂಠ ಕಲ್ಯಾಣಿ.

ಕರ್ನಾಟಕ ಮೂಲದ ಕಲ್ಯಾಣಿ ಕುಟುಂಬವು ಕೊಲ್ಹಾಪುರ ಗಡಿಭಾಗದ ಒಂದು ಪುಟ್ಟ ಗ್ರಾಮ. ಲಿಂಗಾಯತ ಸಮುದಾಯದಲ್ಲಿ ಮೊಟ್ಟ ಮೊದಲ ಬೃಹತ್ ಕೈಗಾರಿಕೆಯನ್ನು ಆರಂಭಿಸಿದ ಭಗೀರಥ. ಅಂದಿನ ಪ್ರಧಾನಿ ಪಂಡಿತ ಜವಾಹರ ಲಾಲ್ ನೆಹರೂ ಅವರನ್ನು ಭೇಟಿ ಮಾಡಿ ಉಕ್ಕು ಮತ್ತು ಕಬ್ಬಿಣದ ಕೈಗಾರಿಕೆ ತಯಾ–ರಿಸಲು 1960 ರಲ್ಲಿ ಶ್ರೀ ನೀಲಕಂಠ ಕಲ್ಯಾಣಿ ಅವರ ಪರಿಶ್ರಮ ಅಪ್ರತಿಮ.

ಡಾ ನೀಲಕಂಠ ಕಲ್ಯಾಣಿ ಅವರು ಕಲ್ಯಾಣಿ ಗ್ರೂಪ್‌ನ ಸಂಸ್ಥಾಪಕರಾಗಿದ್ದು, ಇವರ ತಂದೆ–ತಾಯಿ ಮತ್ತು ಕುಟುಂಬದ ವಿವರಗಳು :

ತಂದೆ: ಅಣ್ಣಪ್ಪ ಎನ್. ಕಲ್ಯಾಣಿ. ಇವರು ಕಲ್ಯಾಣಿ ಕುಟುಂಬದ ಸಂಪತ್ತು ಮತ್ತು ವ್ಯವಹಾರದ ಮೂಲಪುರುಷರಾಗಿದ್ದು, ವೃತ್ತಿಯಿಂದ ಕೃಷಿಕ ಮತ್ತು ವರ್ತಕರಾಗಿದ್ದರು.

ತಾಯಿ: ಅಕುತಾಯ್ ಅಣ್ಣಪ್ಪ ಕಲ್ಯಾಣಿ. ನೀಲಕಂಠ ಕಲ್ಯಾಣಿ ಅವರು ಅಣ್ಣಪ್ಪ ಅವರ ಎರಡನೇ ಪತ್ನಿಯ ಮಗ.

ಪತ್ನಿ: ಸುಲೋಚನಾ ಎನ್. ಕಲ್ಯಾಣಿ. ಇವರು ಗೃಹಿಣಿಯಾಗಿದ್ದರು.

ಮಕ್ಕಳು: ನೀಲಕಂಠ ಕಲ್ಯಾಣಿ ಅವ–ರಿಗೆ ಮೂವರು ಮಕ್ಕಳು: ಬಾಬಾಸಾಹೇಬ್ (ಬಾಬಾ) ಕಲ್ಯಾಣಿ, ಗೌರಿಶಂಕರ್ ಕಲ್ಯಾಣಿ ಮತ್ತು ಮಗಳು ಸುಗಂಧಾ ಹಿರೇಮಠ್.

ಜನ್ಮ ಸ್ಥಳ: ಇವರು ಆಗಸ್ಟ್ 20, 1926 ರಂದು ಮಹಾರಾಷ್ಟ್ರದ ಕೊಲ್ಹಾಪುರದಲ್ಲಿ ಜನಿಸಿದರು.

**ವೃತ್ತಿಜೀವನ:**

ಇವರು 1961 ರಲ್ಲಿ ಭಾರತ್ ಫೋರ್ಜ್ ಕಂಪನಿಯನ್ನು ಸ್ಥಾಪಿಸುವ ಮೂಲಕ ಕಲ್ಯಾಣಿ ಸಮೂಹಕ್ಕೆ ಅಡಿಪಾಯ ಹಾಕಿದರು. ಇವರು ಸಹಕಾರಿ ಕ್ಷೇತ್ರದಲ್ಲಿಯೂ ಸಕ್ರಿಯರಾಗಿದ್ದರು ಮತ್ತು ಮಹಾರಾಷ್ಟ್ರ ರಾಜ್ಯ ಸಹಕಾರಿ ಭೂ ಅಭಿವೃದ್ಧಿ ಬ್ಯಾಂಕ್‌ನ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದರು.


ನೀಲಕಂಠರಾವ್ ಕಲ್ಯಾಣಿ ಅವರು ಪುಣೆಯ ಪ್ರಸಿದ್ಧ ಕೈಗಾರಿಕೋದ್ಯಮಿ ಮತ್ತು ಕಲ್ಯಾಣಿ ಗ್ರೂಪ್ ಹಾಗೂ ಭಾರತ್ ಫೋರ್ಜ್ ಸಂಸ್ಥೆಯ ಸ್ಥಾಪಕರು. ಇವರ ಕುರಿತಾದ ಪ್ರಮುಖ ಮಾಹಿತಿ ಇಲ್ಲಿದೆ:

**ಸ್ಥಾಪನೆ ಮತ್ತು ನಾಯಕತ್ವ**

ಅವರು 1961 ರಲ್ಲಿ ಮುಂಬೈನಲ್ಲಿ ಭಾರತ್ ಫೋರ್ಜ್ ಅನ್ನು ಸ್ಥಾಪಿಸಿದರು, ಇದರ ಪ್ರಧಾನ ಕಚೇರಿ ಈಗ ಪುಣೆಯಲ್ಲಿದೆ. ಇವರ ನಾಯಕತ್ವದಲ್ಲಿ ಈ ಸಂಸ್ಥೆಯು ಉಕ್ಕು, ರಕ್ಷಣೆ ಮತ್ತು ಆಟೋಮೋಟಿವ್ ಕ್ಷೇತ್ರಗಳಲ್ಲಿ ವಿಶ್ವದ ಪ್ರಮುಖ ಸಂಸ್ಥೆಯಾಗಿ ಬೆಳೆಯಿತು.

**ನಿಧನ**

ನೀಲಕಂಠ ಕಲ್ಯಾಣಿ ಅವರು ಆಗಸ್ಟ್ 24, 2013 ರಂದು ತಮ್ಮ 87ನೇ ವಯಸ್ಸಿನಲ್ಲಿ ಪುಣೆಯ ತಮ್ಮ ನಿವಾಸದಲ್ಲಿ ನಿಧನರಾದರು.



**ಕೊಡುಗೆ**

ಇವರು ಉದ್ಯಮವನ್ನು ವಿಕೇಂದ್ರೀಕರಣಗೊಳಿಸುವ ಮೂಲಕ ಸಣ್ಣ ಪಟ್ಟಣಗಳಲ್ಲಿ ಉದ್ಯೋಗಾವಕಾಶಗಳನ್ನು ಸೃಷ್ಟಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದರು.

ಡಾ.ನೀಲಕಂಠ ಎ. ಕಲ್ಯಾಣಿ ಕೈಗಾ–ರಿಕಾ ಸಾಧನೆಗಳು

ನೀಲಕಂಠ ಕಲ್ಯಾಣಿ ಅವರು ಕೇವಲ ಒಬ್ಬ ಉದ್ಯಮಿಯಷ್ಟೇ ಅಲ್ಲದೆ, ಸಹಕಾರಿ ಮತ್ತು ಕೃಷಿ ಕ್ಷೇತ್ರದ ಸುಧಾರಣೆಯಲ್ಲಿ ಮಹತ್ವದ ಪಾತ್ರ ವಹಿಸಿದ್ದರು. ದ ಹಿಂದೂ (The Hindu) ವರದಿ ಮಾಡಿದಂತೆ ಅವರ ಪ್ರಮುಖ ಸಾಧನೆಗಳು ಹೀಗಿವೆ:

**ಭಾರತ್ ಫೋರ್ಜ್ ಸ್ಥಾಪನೆ:**

1961 ರಲ್ಲಿ ಪುಣೆಯಲ್ಲಿ 'ಭಾರತ್ ಫೋರ್ಜ್' ಕಂಪನಿಯನ್ನು ಸ್ಥಾಪಿಸಿದರು. ಇದು ಇಂದು ವಿಶ್ವದ ಅತಿದೊಡ್ಡ ಫೋ–ರ್ಜಿಂಗ್ ಕಂಪನಿಗಳಲ್ಲಿ ಒಂದಾಗಿ ಬೆಳೆದಿದೆ.

**ಸಹಕಾರಿ ಚಳವಳಿ:**

ಮಹಾರಾಷ್ಟ್ರ ರಾಜ್ಯ ಸಹಕಾರಿ ಭೂ ಅಭಿವೃದ್ಧಿ ಬ್ಯಾಂಕ್‌ನ ಅಧ್ಯಕ್ಷರಾಗಿ 12 ವರ್ಷಗಳ ಕಾಲ ಸೇವೆ ಸಲ್ಲಿಸಿದರು. ರೈತ–ರಿಗೆ ಆಧುನಿಕ ಕೃಷಿ ಉಪಕರಣಗಳನ್ನು ಖರೀದಿಸಲು ಸಾಲ ನೀಡುವ ಮೂಲಕ ಕೃಷಿ ಆಧುನೀಕರಣಕ್ಕೆ ನಾಂದಿ ಹಾಡಿದರು.

**ಗೌರವಗಳು**

ಅವರ ಕೈಗಾರಿಕಾ ಮತ್ತು ಕೃಷಿ ಸೇವೆಗಾಗಿ 1991 ರಲ್ಲಿ ಭಾರತ ಸರ್ಕಾರವು ಅವರಿಗೆ ಪದ್ಮಶ್ರೀ ಪ್ರಶಸ್ತಿ ನೀಡಿ ಗೌರವಿಸಿತು. ಕರ್ನಾಟಕ ವಿಶ್ವವಿದ್ಯಾಲಯವು ಇವರಿಗೆ 1976 ರಲ್ಲಿ ಗೌರವ ಡಾಕ್ಟರೇಟ್ ನೀಡಿದೆ.

ಬಾಬಾ ಕಲ್ಯಾಣಿ (ಬಾಬಾಸಾಹೇಬ್ ನೀಲಕಂಠ ಕಲ್ಯಾಣಿ)

ಬಾಬಾ ಕಲ್ಯಾಣಿ ಅವರು ತಮ್ಮ ತಂದೆ ಸ್ಥಾಪಿಸಿದ ಉದ್ಯಮವನ್ನು ಜಾಗತಿಕ ಮಟ್ಟಕ್ಕೆ ಕೊಂಡೊಯ್ದಿದ್ದಾರೆ.

**ಜಾಗತಿಕ ವಿಸ್ತರಣೆ**

1972 ರಲ್ಲಿ ಭಾರತ್ ಫೋರ್ಜ್ ಸೇರಿದಾಗ ಕಂಪನಿಯ ವಹಿವಾಟು ಕೇವಲ $1.3 ಮಿಲಿಯನ್ ಇತ್ತು. ಇಂದು ಅದು $3 ಬಿಲಿಯನ್ ಮೌಲ್ಯದ ಉದ್ಯಮ ಸಮೂಹವಾಗಿದೆ. ಜರ್ಮನಿ, ಸ್ವೀಡನ್ ಮತ್ತು ಅಮೆರಿಕದ ಕಂಪನಿಗಳನ್ನು ಸ್ವಾಧೀನಪಡಿಸಿಕೊಳ್ಳುವ ಮೂಲಕ ಕಂಪನಿಯನ್ನು ಜಾಗತಿಕ ಶಕ್ತಿಯನ್ನಾಗಿ ಮಾಡಿದರು.

**ರಕ್ಷಣಾ ಕ್ಷೇತ್ರ:**

"ಮೇಕ್ ಇನ್ ಇಂಡಿಯಾ" ಅಭಿಯಾನದ ಅಡಿಯಲ್ಲಿ ಭಾರತವನ್ನು ರಕ್ಷಣಾ ಕ್ಷೇತ್ರದಲ್ಲಿ ಸ್ವಾವಲಂಬಿಯನ್ನಾಗಿ ಮಾಡಲು ಶ್ರಮಿಸುತ್ತಿದ್ದಾರೆ. ಇವರ ಕಂಪನಿಯು ಆರ್ಟಿಲರಿ ಗನ್ (¦ügÀAV) ಮತ್ತು ಡ್ರೋನ್‌ಗಳನ್ನು ತಯಾರಿಸುತ್ತಿದೆ.

**ಕರ್ನಾಟಕದೊಂದಿಗೆ ಸಂಬಂಧ**

ಕಲ್ಯಾಣಿ ಕುಟುಂಬ ಮೂಲತಃ ಬೀದರ ಜಿಲ್ಲೆಯ ಬಸವ ಕಲ್ಯಾಣದ ಹಿನ್ನೆಲೆಯುಳ್ಳವರು. ಕಲ್ಯಾಣ ಕ್ರಾಂತಿಯ ನಂತರ ಇವರು ಕೊಲ್ಹಾಪುರ ಗಡಿಭಾಗದ ಕೆಲ ಹಳ್ಳಿಗಳಿಗೆ ಬಂದವರು. ಕಲ್ಯಾಣದಿಂದ ಒಲಸೆ ಬಂದ ಕಾರಣ ಇವರನ್ನು ಕಲ್ಯಾಣಿ ಎಂದು ಕರೆಯಲಾಗುತ್ತದೆ.

ಇವರು ಬೆಳಗಾವಿಯಲ್ಲಿ ಶಿಕ್ಷಣ ಪಡೆದವರು. ಹೊಸಪೇಟೆಯ ಬಳಿ ಕಲ್ಯಾಣಿ ಸ್ಟೀಲ್ಸ್ ಸ್ಥಾಪಿಸಿದ್ದಾರೆ ಮತ್ತು ಬೆಂಗಳೂರು–ಮೈಸೂರು ಕಾರಿಡಾರ್ (NICE) ನಂತಹ ಯೋಜನೆಗಳಲ್ಲಿ ತೊಡಗಿಸಿಕೊಂಡಿದ್ದಾರೆ.



**ಪ್ರಶಸ್ತಿಗಳು**

ಇವರಿಗೆ 2008 ರಲ್ಲಿ ಭಾರತ ಸರ್ಕಾರವು ಪದ್ಮಭೂಷಣ ಪ್ರಶಸ್ತಿ ನೀಡಿ ಗೌರವಿಸಿದೆ. ಇತ್ತೀಚೆಗೆ 2025 ರಲ್ಲಿ CNN-News18 ಇಂಡಿಯನ್ ಆಫ್ ದಿ ಇಯರ್ (ಬಿಸಿನೆಸ್) ಪ್ರಶಸ್ತಿ ಡಾ ಬಾಬಾ ಕಲ್ಯಾಣಿ ಇವರಿಗೆ ದೊರೆತಿದೆ.

ಲಿಂಗಾಯತ ಧರ್ಮದ ಅಪ್ಪಟ ಬಸವ ಭಕ್ತರು ಶರಣ ಸಮಾಜದ ಶ್ರೇಷ್ಠ ಅನುಯಾಯಿಗಳಾದ ಕಲ್ಯಾಣಿ ಕುಟುಂಬ ಅಜ್ಜ ಅಣ್ಣಪ್ಪ ಅಪ್ಪ ನೀಲಕಂಠ ಕಲ್ಯಾಣಿ ಮತ್ತು ಈಗ ಆ ಕುಟುಂಬದ ಶ್ರೇಷ್ಠ ಉದ್ಯೋಗ ಪತಿ ಬಾಬಾ ಕಲ್ಯಾಣಿಯವರು.ಲಕ್ಷಾಂತರ ಜನರಿಗೆ ಉದ್ಯೋಗ ಕಲ್ಪಿಸಿದ ಕಾಯಕಯೋಗಿಗಳು.

ಲೇಖನ
■ ಡಾ ಶಶಿಕಾಂತ ಪಟ್ಟಣ
ರಾಮದುರ್ಗ – ಪುಣೆ
ಮೊ: 9552002338



## ಕೊಲ್ಹಾರದಲ್ಲಿ ಸಿದ್ಧಸಿರಿ ಬ್ಯಾಂಕ್ ನೂತನ ಕಟ್ಟಡಕ್ಕೆ ಭೂಮಿ ಪೂಜೆ

■ **ಉದಯರಶ್ಮಿ ದಿನಪತ್ರಿಕೆ**



ಕೊಲ್ಹಾರ: ಪಟ್ಟಣದಲ್ಲಿ ಗುರುವಾರ ವಿಜಯಪುರ ಸಿದ್ಧಸಿರಿ ಬಹುರಾಜ್ಯ ಬಹುಉ–ದ್ದೇಶ ಸಹಕಾರಿ ಸೊಸೈಟಿ ನಿಯಮಿತದ ಕೊಲ್ಹಾರ ಶಾಖೆಯ ನೂತನ ಕಟ್ಟಡದ ಭೂಮಿ ಪೂಜೆ ಕಾರ್ಯಕ್ರಮವನ್ನು ಶ್ರೀ ದಿಗಂಬರೇಶ್ವರ ಸಂಸ್ಥಾನ ಮಠದ ಕಲ್ಲಿನಾಥ ದೇವರು ನೆರವೇ–ರಿಸಿದರು.

ಕಾರ್ಯಕ್ರಮದಲ್ಲಿ ಪ್ರಾಸ್ತಾವಿಕವಾಗಿ ಬ್ಯಾಂಕ್ ನಿರ್ದೇಶಕ ಜಗದೀಶ ಚಂ. ಕ್ಷತ್ರಿ ಮಾತನಾಡಿ, ನಮ್ಮ ಬ್ಯಾಂಕ್ ಎಲ್ಲಾ ವರ್ಗದ ಜನರಿಗೆ ತಮ್ಮ ಬದುಕು ಕಟ್ಟಿಕೊಳ್ಳಲು ಅವಕಾಶ ಒದಗಿಸುತ್ತಿದೆ. ಗ್ರಾಹಕರ ಹಿತರಕ್ಷಣೆ ನಮ್ಮ ಜವಾಬ್ದಾರಿ. ಗ್ರಾಹಕರ ಏಳಿಗೆಯಿಂದ ನಮ್ಮ ಬ್ಯಾಂಕ್‌ನ ಏಳಿಗೆಯಾಗಿದೆ, ಎಂದು ಹೇಳಿದರು.

ಸಾನಿಧ್ಯ ವಹಿಸಿ ಮಾತನಾಡಿದ ಶ್ರೀ ಕಲ್ಲಿನಾಥ ದೇವರು, "ಕೊಲ್ಹಾರ ಪಟ್ಟಣವು ಮುಳುಗಡೆ ಸಂತ್ರಸ್ತರ ಪ್ರಮುಖ ವಾಸಸ್ಥಳವಾಗಿದೆ. ಇಲ್ಲಿ ಹೆಚ್ಚಿನವರು ಕೃಷಿ ಅವಲಂಬಿತ ಕಾರ್ಮಿಕರು ಮತ್ತು ರೈತರು ಇದ್ದಾರೆ. ಇವರ ಅಭಿವೃದ್ಧಿಗೆ ಬ್ಯಾಂಕ್‌ಗಳು ಹೆಚ್ಚಿನ ಸಹಕಾರ ನೀಡಬೇಕು," ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಷಣ್ಮುಖ ಹಿರೇಮಠ ಸ್ವಾಮಿಗಳು,

ಪಟ್ಟಣ ಪಂಚಾಯತ ಅಧ್ಯಕ್ಷ ಚನ್ನಮಲ್ಲಪ್ಪ ಗಿಡ್ಡಪ್ಪಗೋಳ, ಟಿ.ಟಿ. ಹಗೇದಾಳ, ವಿನೀತಕುಮಾರ್ ಟಿ. ದೇಸಾಯಿ, ಶಶಿಧರ್ ಮಲ್ಲಿಕಾರ್ಜುನ ದೇಸಾಯಿ, ಕಲ್ಲಪ್ಪ ಸಂಗಪ್ಪ ಕಾಖಂಡಕಿ, ಬಸವರಾಜ ಉಪ್ಪಶಪ್ಪ, ಗಿಡ್ಡಪ್ಪಗೋಳ, ಗುರುಪಾದಪ್ಪ ಈರಪ್ಪ ಡೆಂಗಿ, ಉಮೇಶ್ ಬಿ., ಚಾಮರಾಜ ಬೇಳಾಲ್, ಬಸವರಾಜ ಚೀಪರಿ, ಕಿರಣಕುಮಾರ ಹಡಪದ, ಆನಂದ್ ಬಿರಾದಾರ್, ಶಿವರಾಜ್ ದೇಸಾಯಿ ಸೇರಿದಂತೆ ಶಾಖಾ ವ್ಯವಸ್ಥಾಪಕ ಶಿವರಾಜ ದೇಶಪಾಂಡೆ, ಲಕ್ಷ್ಮಣ ಕಾಳಗಿ ಸೇರಿದಂತೆ ಹಲವರಿದ್ದರು.

## ವಿಜಯಪುರದಲ್ಲಿ ಶ್ರೀ ಭಗೀರಥ ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಅಪರ ಜಿಲ್ಲಾಧಿಕಾರಿ ಡಾ.ಔದ್ರಾಮ ಅಭಿಮತ

# ಸಾಧಕರಾಗಲು ಭಗೀರಥ ಪ್ರಯತ್ನ ಮೈಗೂಡಿಸಿಕೊಳ್ಳಬೇಕು

■ **ಉದಯರಶ್ಮಿ ದಿನಪತ್ರಿಕೆ**



ವಿಜಯಪುರ: ಕಠಿಣ ಪರಿಶ್ರಮ ಹಾಗೂ ಛಲ ಹೊಂದಿ ಸಾಧನೆಯಡೆಗೆ ಸಾಗಿ ಸಾಧಕರಾಗಬೇಕು. ಭಗೀರಥ ಪ್ರಯತ್ನ ಮೈಗೂಡಿಸಿಕೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಡಾ.ಔದ್ರಾಮ ಅವರು ಅಭಿಪ್ರಾಯಪಟ್ಟರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಗುರುವಾರ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಶ್ರೀ ಭಗೀರಥ ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಭಗೀರಥ ಎಂದರೆ ವಿಶೇಷ ಪ್ರಯತ್ನ, ಅಸಾಧ್ಯವಾದನ್ನು ಸಾಧಿಸಿ ಬಿಟ್ಟರೆ ಅವರು ಮಾಡಿರುವುದು ಭಗೀರಥ ಪ್ರಯತ್ನ ಎಂದು ಭಗೀರಥರನ್ನು ವರ್ಣಿಸಿದರು.

ಕಾರ್ಯಕ್ರಮದಲ್ಲಿ ಸಂಗಮೇಶ ಮಿರಗಿ ಅವರು ಉಪನ್ಯಾಸ ನೀಡಿ, ಇಂದಿನ ವಿದ್ಯಾರ್ಥಿಗಳು, ಸಾಧಕರು ಅನೇಕ ಎಡರು–ತೊಡರುಗಳನ್ನು ಸೋಲುಗಳನ್ನು ಲೆಕ್ಕಿಸದೇ ಹಿಡಿದ ಕಾರ್ಯವನ್ನು ಬಿಡದೇ ಭಗೀರಥ ಪ್ರಯತ್ನ ನಮಗೆಲ್ಲ ಮಾದರಿ. ಇಂತಹ ಮಹನೀಯರ ಆದರ್ಶ ಅವರ ಬದುಕು ಮಾದರಿಯಾಗಿಸಿಕೊಂಡು ಸಾಧನೆ ಮಾಡಬೇಕು ಎಂದರು.

ಸಮಾಜ ಮುಖಂಡರಾದ ಜಕ್ಕಪ್ಪ ಯಡವೆ ಮಾತನಾಡಿದರು.

ಜಿಲ್ಲಾ ಪಂಚಾಯತಿಯ ಉಪ ನಿರ್ದೇಶಕರಾದ ನಾಗಭೂಷಣ ಮಾಡಕಿ, ಮಹಾನಗರ ಪಾಲಿಕೆ ಉಪ ಆಯುಕ್ತರಾದ ಮಹಾವೀರ ಬೋರಣ್ಣವರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಸಂತೋಷ ಭೋವಿ, ವಾರ್ತಾಧಿಕಾರಿ ಅಮರೇಶ ದೊಡಮನಿ, ಅಡಿವೆಪ್ಪ ಸಾಲಗಲ್, ಸೋಮಗೌಡ ಕಲ್ಲೂರು, ವಿದ್ಯಾವತಿ ಅಂಕಲಗಿ, ಭೀಮರಾಯ ಜಿಗಜಿಣಗಿ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು,

ವಿವಿಧ ಸಮಾಜದ ಮುಖಂಡರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ಎಚ್‌ಟಿಕೆ ಚೌಧರಿ ಪ್ರೌಢಶಾಲೆ ಶೇ.100 ಫಲಿತಾಂಶ ಸಾಧನೆ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ಎಸ್ಸೆಸ್ಸೆಲ್ಸಿ ಪರೀಕ್ಷೆ–1ರ ಫಲಿತಾಂಶ ಗುರುವಾರ ಪ್ರಕಟಗೊಂಡಿದ್ದು ಪಟ್ಟಣದ ಪ್ರಕಾಶ ಚೌಧರಿ ಅವರ ಎಚ್‌ಟಿ–ಕೆ ಚೌಧರಿ ಕನ್ನಡ ಮಾಧ್ಯಮ ಪ್ರೌಢಶಾಲೆಯ ಪರೀಕ್ಷೆಗೆ ಕುಳಿತ 45 ವಿದ್ಯಾರ್ಥಿಗಳಲ್ಲಿ 31 ವಿದ್ಯಾರ್ಥಿಗಳು ಉನ್ನತ ಶ್ರೇಣಿಯಲ್ಲಿ, 14 ವಿದ್ಯಾರ್ಥಿಗಳು ಪ್ರಥಮ ದರ್ಜೆಯಲ್ಲಿ ಪಾಸಾಗುವ ಮೂಲಕ ಉತ್ತಮ ಸಾಧನೆ ಮಾಡಿದ್ದಾರೆ.

ಶೃತಿ ಜೋಗೂರ ಶೇ.98.7, ಶಂಕ್ರೇಮ್ಮ ನಾಟಿಕಾರ ಶೇ.98.2, ಸ್ನೇಹಾಂಜಲಿ ನಾಯ್ಕೊಡಿ ಶೇ.98.2, ಮುತ್ತುರಾಜ ಕುಂಬಾರ ಶೇ.98.2, ಶರಥ ಅತನೂರ ಶೇ.97.9, ಮಲ್ಲನಗೌಡ ಧೂಮಗೊಂಡ ಶೇ.97.9, ಭುವನೇಶ್ವರಿ ಸಂಗೊಂಡ ಶೇ.97.8, ಸಂಗನಬಸು ಕ್ಯಾಗಾವಿ ಶೇ.97.3, ಗುರುರಾಜ ನಂದೂರ ಶೇ.97.3, ಭರತಸಜ್ಜನ ಶೇ.96.8, ಚೇತನ ಬಿರಾದಾರ ಶೇ.96.2, ಶಿವರಾಯ ಮೋಕಾಸಿ ಶೇ.96.2, ವರ್ಷಾ ಬಿರಾದಾಋ ಶೇ.95.8, ಅಂಬಿಕಾ ನಾವಿ ಶೇ.95.7, ಶರಣಮ್ಮ ಕುಂಬಾರ ಶೇ.95.2, ಅಜಯ ಅಂದೋಡಗಿ ಶೇ.95, ಗಂಗಾಧರ ಪೂಜಾರಿ ಶೇ.94.9, ಶಿವರಾಜ ಕೆಂಚಗೊಂಡ ಶೇ.94.7, ಯಲ್ಲಾಲಿಂಗ ನಗನೂರ ಶೇ.94.6, ಶಂಕರಲಿಂಗ ಅರಳಗುಂಡಗಿ ಶೇ.94.1, ಲಕ್ಷ್ಮಿ ನಾವಿ ಶೇ.93.8 ಅಂಕಗಳನ್ನು ಪಡೆದು ಉತ್ತಮ ಸಾಧನೆ ಮಾಡಿದ್ದಾರೆ. ವಿದ್ಯಾರ್ಥಿಗಳ ಸಾಧನೆಗೆ ಸಂಸ್ಥೆಯ ಸಂಚಾಲಕ ಪ್ರಕಾಶ ಚೌಧರಿ, ಆಢಳಿತಾಧಿಖಾರಿ ಮಹಾಂತೇಶ ಚೌಧರಿ, ಮುಖ್ಯಗುರು ವಿಶ್ವನಾಥ ಯಾತನೂರ ಹಾಗೂ ಸಿಬ್ಬಂದಿ ಹರ್ಷ ವ್ಯಕ್ತ ಪಡೆಸಿದ್ದಾರೆ.

# ಎಸ್ಸೆಸ್ಸೆಲ್ಸಿ: ಕಾವ್ಯಾ ಪ್ರೌಢಶಾಲೆ ವಿದ್ಯಾರ್ಥಿಗಳ ಉತ್ತಮ ಸಾಧನೆ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ನಗರದಲ್ಲಿರುವ ಭುವನೇಶ್ವರಿ ವಿದ್ಯಾವರ್ಧಕ ಸಂಸ್ಥೆಯ ಕಾವ್ಯಾ ಪ್ರೌಢಶಾಲೆಯ ವಿದ್ಯಾರ್ಥಿಗಳು ಪ್ರಸಕ್ತ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆ–1ರಲ್ಲಿ ಉತ್ತಮ ಸಾಧನೆ ಮಾಡಿದ್ದಾರೆ. ಎಸ್‌ಎಸ್‌ಎಲ್‌ಸಿ ಮುಖ್ಯ ಪರೀಕ್ಷೆ–1ರಲ್ಲಿ 16 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, ಅದರಲ್ಲಿ ಉತ್ತಮ ಶ್ರೇಣಿಯಲ್ಲಿ 16 ವಿದ್ಯಾರ್ಥಿಗಳು ಪಾಸಾಗಿದ್ದು, ಶಾಲೆಯ ಒಟ್ಟು ಫಲಿತಾಂಶ ಶೇ.100ಕ್ಕೆ 100ರಷ್ಟಾಗಿದೆಣಟಿಜಜಜಿಟಿಜಜ.

ದಾನಮ್ಮ ಕಟ್ಟಿಮನಿ 625 ಅಂಕಗಳಿಗೆ 564 (90.24%) ಅಂಕ ಪಡೆದುಕೊಂಡು ಪ್ರಥಮ ಸ್ಥಾನ, ಜಿಯಾಅಂಜುಮ್ ಶೇಖ 557 (89.12%) ದ್ವಿತೀಯ ಸ್ಥಾನ, ಅಶ್ವಿನಿ ಗಡೆದ 553 (88.48%) ತೃತೀಯ ಸ್ಥಾನ, ಹರ್ಷ ಶಿವಸಿಂಪಿ 515 (82.4%), ಶ್ರೇಯಸ್ ಮಠ 512 (81.92%), ಸಾಕ್ಷಿ ಸುಣಗಾರ 466 (74.56%), ಮಾಜಾನ್ ಮೋಕಾಸಿ 460 (73.6%), ದಸಗೀಡಿಸಾಬ್ ಬಮ್ಮನಜೋಗಿ 442 (70.7%), ಮಮತಾ ಚವ್ಹಾಣ 451 (72.25%), ಸಂಧ್ಯಾ ಹಳ್ಳಪ್ಪನವರ್ 404 (64.64%) ಅಂಕಗಳನ್ನು ಪಡದುಕೊಂಡು ಉತ್ತಮ ಶ್ರೇಣಿಯಲ್ಲಿ ಪಾಸಾಗಿ ಶಾಲೆಗೆ ಕೀರ್ತಿ ತಂದಿದ್ದಾರೆ.

ವಿದ್ಯಾರ್ಥಿಗಳ ಈ ಸಾಧನೆಗೆ ಸಂಸ್ಥೆಯ ಅಧ್ಯಕ್ಷ ಸಿ.ಎಂ.ನಾಗರಬೆಟ್ಟ, ಕಾರ್ಯದರ್ಶಿ ಕಾಂಚನಾ ನಾಗರಬೆಟ್ಟ, ಮುಖ್ಯಗುರು ರಾಜು ಕಾಂಬಳೆ ಸೇರಿದಂತೆ ಸಿಬ್ಬಂದಿಗಳು ಅಭಿನಂದಿಸಿ ಹರ್ಷ ವ್ಯಕ್ತಪಡಿಸಿದ್ದಾರೆ.

# ಗುಬ್ಬೇವಾಡ: ಬಿ.ಎಂ.ಪಾಟೀಲ & ಆಕ್ಸಫರ್ಡ್ ಸ್ಕೂಲ್ ಶೇ.100 ಫಲಿತಾಂಶ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ತಾಲೂಕಿನ ಗುಬ್ಬೇವಾಡ ಗ್ರಾಮದ ಬಿ ಎಂ ಪಾಟೀಲ ಪ್ರೌಢ ಶಾಲೆ ಹಾಗೂ ಆಕ್ಸಫರ್ಡ್ ಇಂಟರನ್ಯಾಷನಲ್ ಸ್ಕೂಲ್ ಶಾಲಾ ಎಸ್ಸೆಸ್ಸೆಲ್ಸಿ 2025–26 ರ ಫಲಿತಾಂಶದಲ್ಲಿ ನೂರಕ್ಕೆ ನೂರು ಸಾಧನೆ ಮಾಡಿದೆ.

ಶಾಲೆಯ ವಿದ್ಯಾರ್ಥಿಗಳಾದ ಕುಮಾರಿ ಅರ್ಚನಾ ಮಲಕಪ್ಪ ಜಾಲವಾದಿ ಬೋರಗಿ 89% ಶಾಲೆಗೆ ಪ್ರಥಮ ಸ್ಥಾನ, ಕುಮಾರ ಸಂತೋಷ ಸಾವಳಸಂಗ ಬೋರಗಿ 88%, ದ್ವಿತೀಯ ಸ್ಥಾನ, ಕುಮಾರ ಸಂಗಮೇಶ ಕುಂಬಾರ ಬೋರಗಿ ತೃತೀಯ 80% ಹಾಗೂ ಕುಮಾರಿ ಕಾವೇರಿ ಚಾವರ 79% ಅಂಕಗಳನ್ನು ಪಡೆದು ಸಾಧನೆ ಮಾಡಿದ್ದಾರೆ.

ವಿದ್ಯಾರ್ಥಿಗಳ ಸಾಧನೆಗೆ ಸಂಸ್ಥೆಯ ಅಧ್ಯಕ್ಷ ಬಾಪುಗೌಡ ಎಂ ಪಾಟೀಲ್ ಹಾಗೂ ಮುಖ್ಯ ಗುರುಗಳು, ಶಿಕ್ಷಕರು, ಸಿಬ್ಬಂದಿ ಮತ್ತು ಪಾಲಕರು ಅಭಿನಂದನೆಗಳು ತಿಳಿಸಿದ್ದಾರೆ.

# ಶಿವಶರಣ ಹರಳಯ್ಯ ಸ್ಮಾರಕ ಪ್ರೌಢಶಾಲೆ ಶೇ.94 ಫಲಿತಾಂಶ

■ ಉದಯರಶ್ಮಿ ದಿನಪತ್ರಿಕೆ



ಜಮಖಂಡಿ: ತಾಲೂಕಿನ ಚಿಕ್ಕಪಡಸಲಗಿ ಗ್ರಾಮದ ಶಿವಶರಣ ಹರಳಯ್ಯ ಸ್ಮಾರಕ ಪ್ರೌಢಶಾಲೆಯು 2025–26ನೇ ಸಾಲಿನ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಶೇ.94ರಷ್ಟು ಉತ್ತಮ ಫಲಿತಾಂಶ ದಾಖಲಿಸಿ ಗಮನ ಸೆಳೆದಿದೆ.

ಈ ಪರೀಕ್ಷೆಯಲ್ಲಿ ಶಾಲೆಯ ವಿದ್ಯಾರ್ಥಿನಿ ಶ್ವೇತಾ ಶ್ರೀ ದಾನಗೌಡ ಶೇ.98 ಅಂಕಗಳನ್ನು ಗಳಿಸಿ ಪ್ರಥಮ ಸ್ಥಾನ ಪಡೆದು ಶಾಲೆಗೆ ಹೆಮ್ಮೆ ತಂದಿದ್ದಾರೆ. ಪ್ರಭಾವತಿ ಪಾ. ಮುರುಗಂಡಿ ಶೇ.97 ಅಂಕಗಳೊಂದಿಗೆ ದ್ವಿತೀಯ ಸ್ಥಾನ ಪಡೆದಿದ್ದು, ಚಂದನಾ ಬ. ನ್ಯಾಮಗೌಡ ಹಾಗೂ ಶ್ರದ್ಧಾ ಪಾ. ತೊದಲಬಾಗಿ ತಲಾ ಶೇ.91 ಅಂಕಗಳನ್ನು ಪಡೆದು ತೃತೀಯ ಸ್ಥಾನ ಗಳಿಸಿದ್ದಾರೆ. ಪರೀಕ್ಷೆಯಲ್ಲಿ ಭಾಗವಹಿಸಿದ ಎಲ್ಲಾ ವಿದ್ಯಾರ್ಥಿಗಳು ಉತ್ತಮ ಅಂಕಗಳನ್ನು ಗಳಿಸುವ ಮೂಲಕ ಶಾಲೆಯ ಕೀರ್ತಿಯನ್ನು ಹೆಚ್ಚಿಸಿದ್ದಾರೆ. ವಿದ್ಯಾರ್ಥಿಗಳ ಈ ಸಾಧನೆಗೆ ಶಾಲೆಯ ಶಿಕ್ಷಕ ವೃಂದದ ಪರಿಶ್ರಮ ಮತ್ತು ಮಾರ್ಗದರ್ಶನ ಪ್ರಮುಖ ಕಾರಣ. ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಜಗದ್ಗುರು ತೋಂಟದಾರ್ಯ ವಿದ್ಯಾಪೀಠದ ಅಧ್ಯಕ್ಷರಾದ ಡಾ.ತೋಂಟದಸಿದ್ಧರಾಮಮಹಾಸ್ವಾಮಿಗಳು, ಸಂಸ್ಥೆಯ ಕಾರ್ಯದರ್ಶಿಗಳು, ಸ್ಥಳೀಯ ಆಡಳಿತ ಮಂಡಳಿ ಸದಸ್ಯರು, ಶಾಲೆಯ ಮುಖ್ಯೋಪಾಧ್ಯಾಯರು, ಶಿಕ್ಷಕರು ಹಾಗೂ ಪೋಷಕರು ಅಭಿನಂದಿಸಿ ಭವಿಷ್ಯದಲ್ಲಿ ಇನ್ನಷ್ಟು ಸಾಧನೆ ಮಾಡಲು ಹಾರೈಸಿದ್ದಾರೆ.

# ಚಿತ್ರಕಲಾ ಸ್ಪರ್ಧೆ; ಕಲಾಕೃತಿಗಳಿಗೆ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ಕಲಬುರ್ಗಿ: ಗುಲಬರ್ಗಾ ಅಕಾಡೆಮಿ ಆಫ್ ಆರ್ಟ್, ಕಲ್ಚರ್ ಆಯಿಂಡ್ ಲಿಟ್ರೇಚರ್ ಸಂಸ್ಥೆಯ 15ನೇ ವಾರ್ಷಿಕೋತ್ಸವದಂಗವಾಗಿ ರಾಷ್ಟ್ರೀಯ ಮಟ್ಟದ ಚಿತ್ರಕಲಾ ಸ್ಪರ್ಧೆ ಹಾಗೂ ಪ್ರದರ್ಶನಕ್ಕಾಗಿ ಕಲಾಕೃತಿಗಳನ್ನು ಆಹ್ವಾನಿಸಲಾಗಿದೆ ಎಂದು ಸಂಸ್ಥೆಯ ಕಾರ್ಯದರ್ಶಿ ಚಿದಾನಂದ್ ರೂಲೆ ಅವರು ತಿಳಿಸಿದ್ದಾರೆ. ಒಂದು ಅತ್ಯುತ್ತಮ ಕಲಾಕೃತಿಗೆ 10 ಸಾವಿರ ರೂ. ನಗದು ಮತ್ತು ಪ್ರಶಸ್ತಿ ಪತ್ರ ಹಾಗೂ ಒಂದು ಅತ್ಯುತ್ತಮ ಕಲಾಕೃತಿಗೆ 5 ಸಾವಿರ ರೂ.ಗಳ ನಗದು ಮತ್ತು ಪ್ರಶಸ್ತಿ ಪತ್ರ ಹಾಗೂ ಎರಡು ಅತ್ಯುತ್ತಮ ಕಲಾಕೃತಿಗಳಿಗೆ ತಲಾ 2.500 ರೂ.ಗಳ ನಗದು ಮತ್ತು ಪ್ರಶಸ್ತಿ ಪತ್ರ ಹಾಗೂ ಐದು ಅತ್ಯುತ್ತಮ ಕಲಾಕೃತಿಗಳಿಗೆ ತಲಾ 1.000 ಸಾವಿರ ರೂ.ಗಳ ನಗದು ಮತ್ತು ಪ್ರಶಸ್ತಿ ಪತ್ರ ನಿಡಿದರು.

# ಆಕ್ಸಫರ್ಡ ಆಂಗ್ಲ ಮಾಧ್ಯಮ ಪ್ರೌಢಶಾಲೆ ಫಲಿತಾಂಶ ಶೇ.100 ಸಾಧನೆ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ಎಸ್ಸೆಸ್ಸೆಲ್ಸಿ ಪರೀಕ್ಷೆ–ರ ಫಲಿತಾಂಶ ಗುರುವಾರ ಪ್ರಕಟಗೊಂಡಿದ್ದು ಪಟ್ಟಣದ ಪ್ರಕಾಶ ಚೌಧರಿ ಅವರ ಆಕ್ಷಫರ್ಡ ಆಂಗ್ಲ ಮಾಧ್ಯಮ ಪ್ರೌಢಶಾಲೆಯ ಶೇ.100 ರಷ್ಟಾಗಿದೆ. ಪರೀಕ್ಷೆಗೆ ಕುಳಿತ 64 ವಿದ್ಯಾರ್ಥಿಗಳಲ್ಲಿ 45 ವಿದ್ಯಾರ್ಥಿಗಳು ಉನ್ನತ ಶ್ರೇಣಿಯಲ್ಲಿ, 19 ವಿದ್ಯಾರ್ಥಿಗಳು ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾಗಿದ್ದಾರೆ.

ಅಮೃತಾ ದೊಡಮನಿ ಶೇ.98.72, ಸಾನಿಕಾ ಬಿರಾದಾರ ಶೇ.98.24, ಭೂಮಿಕಾ ಶಿವಣಗಿ ಶೇ.97.7, ಅಭಿಲಾಶಾ ಕೆರಕಿ ಶೇ.97.4, ಸಾಗರ ಸ್ಥಾವರಮಠ ಶೇ.97.4, ಸ್ನೇಹಾ ಜೋಗುರ ಶೇ.97.4, ಸಮರ್ಥ ಕಾಬಾ ಶೇ.96.9, ವರಪ್ರಸಾದ ಹೂಗಾರ ಶೇ.96.9, ವಿಜಯರೆಡ್ಡಿ ಬಿರಾದಾರ ಶೇ.96.9, ಸುನೀಲ ರೂಗಿ ಶೆ.96.6, ಅಪೂರ್ವಾ ಚುಂಚೂರ ಶೇ.96.4, ಅರ್ಪಿತಾ ಕತ್ತಿ ಶೇ.96.1, ಅಭಿಶೇಷ ಮಡಕೇಶ್ವರ ಶೇ.96, ಗುರುಶಾಂತ ಕುಂಬಾರ ಶೇ.95.6, ಶಿವಕುಮಾರ ಹಿರೇಮಠ ಶೇ.95.3, ಶ್ರೀಗಿರಿ ಚಾವರ ಶೇ.95.3, ಲಕ್ಷ್ಮಿ ಚಿಂಚೊಳ್ಳಿ ಶೇ.95.2, ಸಮೀರ ಚವ್ಹಾಣ ಶೇ.94.8, ಸಂಗನಗೌಡ ಬಳವಟಿ ಶೇ.94.5, ಮಲ್ಲಿಕಾರ್ಜುನ ಕುಂಬಾರ ಶೇ.94.2, ಕಾರ್ತಿ ಚವ್ಹಾಣ ಶೇ.94.8, ಸೌಮ್ಯಶ್ರೀ ಕಲ್ಲೂರ ಶೇ.94.8, ಸಮಥ– ಬಬಲೇಶ್ವರ ಶೇ.93.7, ಸಾಯಿಪ್ರಸಾದ ಚೌಧರಿ ಶೇ.93.1, ಗುರುಪ್ರಸಾದ ಸಾಲೋಟಗಿ ಶೇ.92.9, ಮಹಾದೇವಿ ಕನ್ನೂರ ಶೇ.92.9, ಸೃದ್ಧಾ ಗೌರ ಶೇ.92.9, ಯಲ್ಲಾಲಿಂಗ ನಗನೂರ ಶೇ.92.8, ಚಾಯಾ ಚವ್ಹಾಣ ಶೇ.92.6, ಪ್ರೀತಮ ಪವಾರ ಶೇ.92.6, ಸಂಕೇತ ದುದ್ದಗಿ ಶೇ.92.6, ರೇಣುಕಾ ಡೋಣೂರ ಶೇ.92.4, ಬೀರಪ್ಪ ದೇವರಮನಿ ಶೇ.92.1, ಅಭಿಜೀತ ಕಂಬಾರ ಶೇ.92.1, ಶಶಾಂಕ ದೇವರಮನಿ ಶೇ.92, ಸಾಕ್ಷಿ ಮರಬದ ಶೇ.91.8, ಕಾವೇರಿ ತಳವಾರ ಶೇ.91.5, ಕಾವೇರಿ ಮೋಟಗಿ ಶೇ.91.3, ಸಮರ್ಥ ಮೋಟಗಿ 91.3, ಶಿವಶರಣ ಗಡಂಚಿ ಶೇ.91.3, ಶ್ರೀನಿವಾಶಗೌಡ ಬಿರಾದಾರ ಶೇ.91.2, ಆಕಾಶ ಪತ್ತಾರ ಶೇ.90.8 ಅಂಕಪಡೆದು ಉತ್ತಮ ಸಾಧನೆ ಮಾಡಿದ್ದಾರೆ. ಸಂಸ್ಥೆಯ ಸಂಚಾಲಕ ಪ್ರಕಾಶ ಚೌಧರಿ, ಆಢಳಿತಾಧಿಕಾರಿ ಮಹಾಂತೇಶ ಚೌಧರಿ, ಮುಖ್ಯಗುರು ವಿಶ್ವನಾಥ ಯಾತನೂರ ಹಾಗೂ ಸಿಬ್ಬಂದಿ ಹರ್ಷ ವ್ಯಕ್ತ ಪಡೆಸಿದ್ದಾರೆ.

# ಎಸ್ಸೆಸ್ಸೆಲ್ಸಿ: ಪ್ರೇರಣಾ ಶಾಲೆ ವಿದ್ಯಾರ್ಥಿಗಳ ಅತ್ಯುತ್ತಮ ಸಾಧನೆ

■ ಉದಯರಶ್ಮಿ ದಿನಪತ್ರಿಕೆ



608 (ಶೇ.97.28)

ಸಿಂದಗಿ: ನಗರದ ಹೊರವಲಯದ ಆಲಮೇಲ ರಸ್ತೆಯಲ್ಲಿರುವ ಪ್ರೇರಣಾ ಪಬ್ಲಿಕ್ ಆಂಗ್ಲ ಮಾಧ್ಯಮ ಪ್ರೌಢ ಶಾಲೆಯ ವಿದ್ಯಾರ್ಥಿಗಳು ಪ್ರಸಕ್ತ ಸಾಲಿನ ಎಸ್‌ಎಸ್–ಎಲ್‌ಸಿ ಪರೀಕ್ಷೆ–1ರಲ್ಲಿ ಉತ್ತಮ ಸಾಧನೆ ಮಾಡಿದ್ದಾರೆ. ಎಸ್‌ಎಸ್‌ಎಲ್‌ಸಿ ಮುಖ್ಯ ಪರೀಕ್ಷೆ–1ರಲ್ಲಿ 84 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, ಅದರಲ್ಲಿ ಅತ್ಯುನ್ನತ ಶ್ರೇಣಿಯಲ್ಲಿ 56, ಪ್ರಥಮ ಶ್ರೇಣಿ 26, ದ್ವಿತೀಯ ಶ್ರೇಣಿ 02 ವಿದ್ಯಾರ್ಥಿಗಳು ಪಾಸಾಗಿದ್ದು, ಶಾಲೆಯ ಒಟ್ಟು ಫಲಿತಾಂಶ ಶೇ.100ಕ್ಕೆ 100ರಷ್ಟಾಗಿದೆಣಟಿಜಜಜಿಟಿಜಜ.

ಅನುಸುಯಾ ಹಿರೇಮಠ 625 ಅಂಕಗಳಿಗೆ 615 (ಶೇ.98.40), ಅಂಕಗಳು ಪಡೆದು ಪ್ರಥಮ ಸ್ಥಾನ, ವೈಷ್ಣವಿ ರೇವೂರ 613 (ಶೇ.98.08), ದ್ವಿತೀಯ, ಶಿವಾನಿ ಬಿರಾದಾರ ತೃತೀಯ, ಸಂಜೀವ ಬಮ್ಮಣ್ಣಿ 606 (ಶೇ.96.96), ವೇದಾ ಬಾಗಲಕೋಟ 606 (96.96%), ಅಪೇಕ್ಷಾ ಹುಗ್ಗಿ 601 (96.96%), ಆದರ್ಶ ಚಾಂದಕವಟೆ 599 (95.84%), ಪೂರ್ವಿ ಪಟ್ಟಣಶೆಟ್ಟಿ 598 (95.68%), ಶ್ರೇಯಾ ಅಗಸರ 598 (95.68%), ಸುಕೃತಾ ತೋಟದ 598 (95.68%), ಪ್ರಜ್ವಲ ಕಂಗಾಳ 597 (95.52%), ವಿಶ್ವಾಸ ಬಗಲಿ 597 (95.52%), ದುಂಡಮ್ಮ ಬಿರಾದಾರ 596 (95.36%), ಪೂರ್ವಿ ಪಾಟೀಲ 596 (95.36%), ಹರ್ಷಿತಾ ವಾಗಮಂಡಿ 594 (95.04%), ವೈಷ್ಣವಿ ಜಾಬಾನೂರ 594 (95.04%), ವಿದ್ಯಾಶ್ರೀ ನಾಯಕ 594 (95.04%) ಅಂಕಗಳನ್ನು ಪಡದುಕೊಂಡು ಅತ್ಯುನ್ನತ ಶ್ರೇಣಿಯಲ್ಲಿ ಪಾಸಾಗಿ ಶಾಲೆಗೆ ಕೀರ್ತಿ ತಂದಿದ್ದಾರೆ.

ವಿದ್ಯಾರ್ಥಿಗಳ ಈ ಸಾಧನೆಗೆ ಸಂಸ್ಥೆಯ ಅಧ್ಯಕ್ಷ ಆರ್.ಡಿ.ಕುಲಕರ್ಣಿ, ಪಿ.ಡಿ.ಕುಲಕರ್ಣಿ, ಮುಖ್ಯ ಗುರುಮಾತೆ ಎಸ್.ಆಯ್.ಅಸ್ಕಿ ಸೇರಿದಂತೆ ಶಾಲೆಯ ಆಡಳಿತ ಮಂಡಳಿ ಸದಸ್ಯರು, ಬೋಧಕ–ಬೋಧಕೇತರ ಸಿಬ್ಬಂದಿಗಳು ಅಭಿನಂದಿಸಿ ಹರ್ಷ ವ್ಯಕ್ತಪಡಿಸಿದ್ದಾರೆ.

# ನಿಂಗಯ್ಯ ಗೆ ರಾಜ್ಯಪಾಲರಿಂದ ಪಿಎಚ್‌ಡಿ ಪದವಿ ಪ್ರದಾನ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ವಿಜಯಪುರ ಜಿಲ್ಲೆಯ ಸಿಂದಗಿ ತಾಲೂಕಿನ ಗುತ್ತರಗಿ ಗ್ರಾಮದ ನಿವಾಸಿ ನಿಂಗಯ್ಯ ಗುರುಪಾದಯ್ಯ ಮಠ ಅವರು ಮಂಡಿಸಿದ "ಸ್ಪೇಷಲ್ ಪ್ಯಾಟರ್ನ್ ಆಂಡ್ ಹ್ಯಾರ್ಕಿ ರೂರಲ್ ಸೆಟ್ಲಮೆಂಟ್ಸ್ ಇನ್ ವಿಜಯಪುರ ಡಿಸ್ಟ್ರಿಕ್ಟ್ ಎ ಸ್ಟ್ರಾಟಜಿ ಫಾರ್ ಬ್ಯಾಲೆನ್ಸ್ ಡೆವಲಪ್‌ಮೆಂಟ್" ಎಂಬ ಮಹಾಪ್ರಬಂಧಕ್ಕೆ ಧಾರವಾಡದ ಕರ್ನಾಟಕ ವಿಶ್ವವಿದ್ಯಾಲಯದ ಗಾಂದಿ ಭವನದಲ್ಲಿ ಜರುಗಿದ 75ನೇ ಘಟಿಕೋತ್ಸವದಲ್ಲಿ ರಾಜ್ಯಪಾಲರಾದ ಥಾವರಚಂದ್ ಗೆಹಲೋಟ್ ಅವರು ಪಿಹೆಚ್‌ಡಿ ಪದವಿ ಪ್ರಧಾನ ಮಾಡಿದರು.

ಕರ್ನಾಟಕ ವಿಶ್ವವಿದ್ಯಾಲಯವು ಪಿ.ಎಚ್‌ಡಿ ಪದವಿ ಪ್ರಧಾನ ಮಾಡಿದಕ್ಕೆ ವಿಭಾಗದ ಮುಖ್ಯಸ್ಥ ಭೂಗೋಳಶಾಸ್ತ್ರ ವಿಭಾಗದ ಪ್ರಾಧ್ಯಾಪಕ ಡಾ.ಎಲ್.ಟಿ.ನಾಯಕ ಸೇರಿದಂತೆ ಗ್ರಾಮಸ್ಥರು ಅಭಿನಂದಿಸಿದ್ದಾರೆ.

# ಭಾರತೀಯ ಸಂಸ್ಕೃತಿಗೆ ಜಾನಪದವೇ ಅಡಿಪಾಯ: ಡಾ. ಪೆರ್ಲ

■ ಉದಯರಶ್ಮಿ ದಿನಪತ್ರಿಕೆ

ಕಲಬುರ್ಗಿ: ಭಾರತೀಯ ಸಂಸ್ಕೃತಿ ವಿಶ್ವ ಮಟ್ಟದಲ್ಲಿ ಮೇರು ಸ್ಥಾನದಲ್ಲಿ ನಿಲ್ಲಲು ಅದಕ್ಕೆ ಮೂಲ ಅಡಿಪಾಯ ಜಾನಪದ ಎಂದು ಆಕಾಶವಾಣಿಯ ನಿವೃತ್ತ ಕಾರ್ಯಕ್ರಮ ಡಾ. ಸದಾನಂದ ಪೆರ್ಲ ಅವರು ಹೇಳಿದರು.

ನಗರದ ಕನ್ನಡ ಭವನದಲ್ಲಿ ಪ್ರಿಯದರ್ಶಿನಿ ಸಂಗೀತ, ಸಾಂಸ್ಕೃತಿಕ ಸೇವಾ ಸಂಸ್ಥೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಇವರುಗಳ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಿದ ಗ್ರಾಮೀಣ ಜಾನಪದ ಕಲಾ ಮಹೋತ್ಸವ ಉದ್ಘಾಟಿಸಿ ಮಾತನಾಡಿದ ಅವರು, ಅನಕ್ಷರಸ್ತ ಗ್ರಾಮೀಣ ಜನರಿಂದ ಹುಟ್ಟಿಕೊಂಡ ಜನಪದ ಸಾಹಿತ್ಯ ಮತ್ತು ಕಲಾ ಪ್ರಕಾರಗಳು ತಲೆಮಾರಿನಿಂದ ತಲೆಮಾರಿಗೆ ಹರಿದು ಬಂದು ಭಾರತೀಯ ಸಂಸ್ಕೃತಿಗೆ ಗಟ್ಟಿ ಅಡಿಪಾಯವಾಗಿ ನಿಂತಿದೆ. ಅದರ ತಳಹದಿಯಲ್ಲಿ ಜೀವನ ಮೌಲ್ಯ ಮತ್ತು ಆದರ್ಶಗಳನ್ನು ಚಿರಕಾಲ ಉಳಿಯುವಂತೆ ಮಾಡಿದೆ ಎಂದರು. ಆಧುನಿಕ ಯುಗದಲ್ಲಿ ತಾಂತ್ರಿಕ ಮತ್ತು ವೈಜ್ಞಾನಿಕ ಬೆಳವಣಿಗೆಯ ನಾಗಾಲೋಟದಲ್ಲಿ ಮಾನವೀಯ ಮೌಲ್ಯಗಳು ಮತ್ತು ಮನುಷ್ಯ ಸಂಬಂಧಗಳು ದೂರಾಗುತ್ತಿವೆ. ಈ ಸಂದರ್ಭದಲ್ಲಿ ಜನಪದ ಕಲೆ, ಸಾಹಿತ್ಯ, ಸಂಗೀತ ವೈದ್ಯ ಪದ್ಧತಿ ಹೀಗೆ ಜನಪದದ ನಾನಾ ಪ್ರಕಾರಗಳನ್ನು ಮುಂದಿನ ಜನಮಾನಸಕ್ಕೆ ಅದರಲ್ಲೂ ಮುಖ್ಯವಾಗಿ ಯುವಜನತೆಗೆ ಮುಟ್ಟಿಸುವ ದೊಡ್ಡ ಕೆಲಸವನ್ನು ಸ್ವಯಂಸೇವಾ ಸಂಸ್ಥೆಗಳು ಕೈಗೊಳ್ಳಬೇಕಾದ ಅಗತ್ಯವಿದೆ ಎಂದು ಅವರು ಹೇಳಿದರು. ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಗೌರವ ಕಾರ್ಯದರ್ಶಿ ಧರ್ಮಣ್ಣ ಎಚ್. ಧನ್ನಿ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಜನಪದ ಸಾಹಿತ್ಯ ಮತ್ತು ಸಂಸ್ಕೃತಿಯನ್ನು ಉಳಿಸಿ ಬೆಳೆಸುವಲ್ಲಿ ಕಲಾವಿದರ ಪಾತ್ರ ಹಿರಿದು, ವಿಜ್ಞಾನ ಮತ್ತು ತಾಂತ್ರಿಕ ಯುಗದಲ್ಲಿ ಜನಪದ ಕಲೆಗಳು ನಶಿಸಿ ಹೋಗುತ್ತಿವೆ. ಅವುಗಳ ಉಳುವಿಗಾಗಿ ಕಲಾವಿದರಿಗೆ ಸೂಕ್ತ ಅವಕಾಶಗಳನ್ನು ಕಲ್ಪಿಸಿಕೊಡಬೇಕು ಎಂದು ಸರ್ಕಾರಕ್ಕೆ ಮನವಿ ಮಾಡಿದರು. ಸಂಸ್ಥೆಯ ಮುಖಂಡ ಶಿವಶಂಕರ ಬಿಳಾಲಕರ್ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು.

# ಕಾಂಗ್ರೆಸ್ ವಿರುದ್ಧ ಜೆಡಿಎಸ್ ಪ್ರತಿಭಟನೆ: ಮಹಿಳಾ ಮೀಸಲಾತಿ ಜಾರಿಯಾದರೆ ಕಾಂಗ್ರೆಸ್‌ಗೆ ಸರ್ವನಾಶದ ಭೀತಿ: ಮಹೇಶ್ವರಿ ವಾಲಿ

■ ಉದಯರಶ್ಮಿ ದಿನಪತ್ರಿಕೆ




ಕಲಬುರ್ಗಿ: ಕ್ಷೇತ್ರಗಳ ಪುನರ್ ವಿಂಗಡಣೆಯೊಂದಿಗೆ ಮಹಿಳಾ ಮೀಸಲಾತಿ ಜಾರಿಯಾದಲ್ಲಿ ಕಾಂಗ್ರೆಸ್ ಪಕ್ಷವು ದೇಶದಲ್ಲಿ ಸರ್ವನಾಶವಾಗಲಿದೆ ಎಂಬ ಭೀತಿ ಆ ಪಕ್ಷದ ಮುಖಂಡರಿಗಿದೆ ಎಂದು ಜಾತ್ಯಾತೀತ ಜನತಾದಳದ ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ಶ್ರೀಮತಿ ಮಹೇಶ್ವರಿ ವಾಲಿ ಅವರು ಹೇಳಿದರು.

ಸಂಸತ್ತಿನಲ್ಲಿ ಮಹಿಳಾ ಮೀಸಲಾತಿ ಕಾಯ್ದೆಗೆ ಸೋಲಿಗೆ ಕಾರಣವಾದ ಕಾಂಗ್ರೆಸ್ ವಿರುದ್ಧ ಬುಧವಾರ ಜೆಡಿಎಸ್ ಹಮ್ಮಿಕೊಂಡಿದ್ದ ಪ್ರತಿಭಟನೆಯಲ್ಲಿ ನೇತೃತ್ವ ವಹಿಸಿ ಮಾತನಾಡಿದ ಅವರು, ದೇಶದಲ್ಲಿ ಈ ಹಿಂದಿನಿಂದಲೂ ದೇಶಕ್ಕೆ ಸ್ವಾತಂತ್ರ್ಯ ಸಿಕ್ಕಾಗಿನಿಂದಲೂ ಪಂಡಿತ್ ಜವಾಹರಲಾಲ್ ನೆಹರೂ ಅವರಿಂದ ಹಿಡಿದು, ಇಂದಿರಾಗಾಂಧಿಯಿಂದ ಶ್ರೀಮತಿ ಸೋನಿಯಾಗಾಂಧಿ ಹಾಗೂ ಪ್ರಿಯಾಂಕಾ ವಾಡ್ರಾ ಅವರೇ ಕಾಂಗ್ರೆಸ್ ಪಕ್ಷದಲ್ಲಿ ಸರ್ವಾಧಿಕಾರಿಗಳಾಗಿದ್ದಾರೆ ಎಂದು ದೂರಿದರು.

ಕೇಂದ್ರದಲ್ಲಿ ಕಾಂಗ್ರೆಸ್ ಅಧಿಕಾರದಲ್ಲಿದ್ದರೂ ಸಹ ಶ್ರೀಮತಿ ಸೋನಿಯಾಗಾಂಧಿ ಹಾಗೂ ಶ್ರೀಮತಿ ಪ್ರಿಯಾಂಕಾ ವಾಡ್ರಾ ಅವರೇ ಮುಂದಾಳತ್ವ ವಹಿಸುತ್ತಿದ್ದಾರೆ. ಅವರಿಗೆ ಸಂಸತ್ತಿನಲ್ಲಿ ಕುಳಿತುಕೊಳ್ಳಲು ನಾಚಿಕೆಯಾಗಬೇಕು. ನಾವೇ ಸಂಸತ್ತಿನಲ್ಲಿ ಇರಬೇಕು. ಮಹಿಳೆಯರು ಇರಬಾರದು ಎಂಬ ಕಾರಣದಿಂದ ನಮ್ಮ ಮಹಿಳಾ ಹಕ್ಕು ಕಸಿದುಕೊಂಡಿದ್ದಾರೆ. ಹೀಗಾಗಿ ಕಳೆದ 2023ರ ಮಹಿಳಾ ಮೀಸಲಾತಿ ಕಾಯ್ದೆಯು ಕಾಂಗ್ರೆಸ್ ಪಕ್ಷದ ಕುಟುಂಬ ರಾಜಕಾರಣಕ್ಕೆ ಮತ್ತಷ್ಟು ಬೆಂಬಲಿಸುತ್ತಿತ್ತು. ಹಾಗಾಗಿ ಮಹಿಳೆಯರಿಗೆ ಸಂಸತ್ತಿನಲ್ಲಿ ಹಕ್ಕುಗಳನ್ನು ರಕ್ಷಿಸಲು ಕೇಂದ್ರದಲ್ಲಿನ ಎನ್‌ಡಿಎ ಸರ್ಕಾರವು ಕ್ಷೇತ್ರಗಳ ಪುನರ್ ವಿಂಗಡಣೆಯೊಂದಿಗೆ ಮಹಿಳಾ ಮೀಸಲಾತಿಯನ್ನು ಜಾರಿಗೆ ತರಲು ಬಯಸಿತ್ತು. ಈ ಕಾಯ್ದೆಯು ಎಲ್ಲಿ ತಮ್ಮ ನಾಯಕತ್ವ ಹಾಗೂ ಪಕ್ಷವನ್ನು ಸರ್ವ ನಾಶ ಮಾಡಲಿದೆ ಎಂಬ ಆತಂಕಕ್ಕೆ ಒಳಗಾಗಿ ಕಾಂಗ್ರೆಸ್ಸಿನವರು ಮಹಿಳಾ ಮೀಸಲಾತಿ ವಿಧೇಯಕವನ್ನು ಸೋಲಿಸಿದರು ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು.

ಮಾಜಿ ಪ್ರಧಾನಿ ಎಚ್.ಡಿ. ದೇವೆಗೌಡ ಹಾಗೂ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರ ನೇತೃತ್ವದಲ್ಲಿನ ಜೆಡಿಎಸ್ ಪಕ್ಷವು ಮಹಿಳಾ ಮೀಸಲಾತಿಯನ್ನು ಸಂಪೂರ್ಣವಾಗಿ ಬೆಂಬಲಿಸಿದೆ. ಜೆಡಿಎಸ್ ಮಹಿಳಾ ಘಟಕದ ರಾಜ್ಯಾಧ್ಯಕ್ಷರು ಸಹ ಈ ಕುರಿತು ಮಹಿಳೆಯರ ಹಕ್ಕುಗಳಿಗಾಗಿ ನಿರಂತರ ಹೋರಾಟ ಮಾಡುತ್ತಿದ್ದಾರೆ ಎಂದು ಅವರು ಹೇಳಿದರು.

ಮಹಿಳೆಯರಿಗೆ ಅನ್ಯಾಯ ಮಾಡಿದ ಕಾಂಗ್ರೆಸ್ ಹಾಗೂ ಅದರ ಮಿತ್ರಪಕ್ಷಗಳಿಗೆ ಧಿಕ್ಕಾರ ಹಾಕಿದ ಅವರು, ಮುಂದಾದರೂ ಸಹ ವಿರೋಧ ಪಕ್ಷಗಳು ಮಹಿಳಾ ವಿರೋಧಿ ನೀತಿಯನ್ನು ಕೈಬಿಟ್ಟು ಮಹಿಳಾ ಮೀಸಲಾತಿ ವಿಧೇಯಕಕ್ಕೆ ಬೆಂಬಲಿಸಬೇಕು ಎಂದು ಒತ್ತಾಯಿಸಿದರು.

ಇದು ಸೋಲು ಸೋಲಲ್ಲ. ಮುಂದೆ ಮಹಿಳಾ ಮಸೂದೆ ಗೆಲ್ಲಲಿದೆ. ಈಗ ಭಾರತ್ ಮಾತಾಕೀ ಜೈ ಎನ್ನುತ್ತೇವೆ. ಮುಂದೆ ಮಹಿಳೆಯರ ಪರ ಜೈ ಹಾಕುತ್ತೇವೆ. ಮಹಿಳಾ ಮೀಸಲಾತಿಯನ್ನು ಜಾರಿಯಾಗುವುದು ಖಚಿತ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು.

ಪಕ್ಷದ ಜಿಲ್ಲಾಧ್ಯಕ್ಷ ಬಾಲರಾಜ್ ಅಶೋಕ್ ಗುತ್ತೇದಾರ್ ಅವರು ಮಾತನಾಡಿ, ನಗರದಲ್ಲಿ ಜೆಡಿಎಸ್ ವತಿಯಿಂದ ಮಹಿಳೆಯರಿಗೆ ಶೇಕಡಾ 33ರಷ್ಟು ಮೀಸಲಾತಿ ಒದಗಿಸುವ ಕಾಯ್ದೆ ಸಂಸತ್ತಿನಲ್ಲಿ ಅಂಗೀಕಾರವಾಗಬೇಕಿತ್ತು. ಆದಾಗ್ಯೂ, ಕಾಂಗ್ರೆಸ್ ಮತ್ತು ಅದರ ಮಿತ್ರ ಪಕ್ಷಗಳು ಕಾಯ್ದೆಯನ್ನು ವಿರೋಧಿಸುವ ಮೂಲಕ ಮಹಿಳೆಯರಿಗೆ ಅನ್ಯಾಯ ಮಾಡಿದೆ ಎಂದು ಆರೋಪಿಸಿದರು.

ನಾವು ಸುಮ್ಮನೇ ಕೂಡುವುದಿಲ್ಲ. ಕೂಡಲೇ ಕಾಂಗ್ರೆಸ್ ಮಹಿಳಾ ವಿರೋಧಿ ನೀತಿಯನ್ನು ಕೈಬಿಡಬೇಕು. ಇಲ್ಲದಿದ್ದರೆ ಇಡೀ ಮಹಿಳೆಯರು ಕಾಂಗ್ರೆಸ್ ವಿರುದ್ಧ ಬೀದಿಗಿಳಿದು ಪ್ರತಿಭಟನೆ ಮಾಡುವಂತಹ ಸ್ಥಿತಿ ನಿರ್ಮಾಣವಾಗಲಿದೆ. ಈಗಲೂ ಕಾಲ ಮಿಂಚಿಲ್ಲ. ಮಹಿಳಾ ಮೀಸಲಾತಿ ವಿಧೇಯಕವನ್ನು ಕಾಂಗ್ರೆಸ್ ಬೆಂಬಲಿಸಬೇಕು ಎಂದು ಅವರು ಎಚ್ಚರಿಸಿದರು.

ಪ್ರತಿಭಟನೆಯಲ್ಲಿ ಜಿಲ್ಲಾ ಮಹಾ ಪ್ರಧಾನ ಕಾರ್ಯದರ್ಶಿ ಬಸವರಾಜ್ ಬೀರಬಟ್ಟಿ, ಶಂಕರಗೌಡ ಪಾಟೀಲ್, ಮಲ್ಲಿಕಾರ್ಜುನ್ ಸಂಗಣಿ, ಮಹಾಂತಪ್ಪ ಮದರಿ, ವಿಠಲ್ ಜಾಧವ್, ರವಿಶಂಕರರೆಡ್ಡಿ, ಮಂಜುಗೌಡ ಪಾಟೀಲ್, ರಿಜವಾನ್ ಅಹ್ಮದ್, ಪ್ರವೀಣ್ ಜಾಧವ್, ರಾಜೇ ಪಟೇಲ್, ಕಿರಣ್ ಪಾಟೀಲ್, ಶಿವಲಿಂಗಪ್ಪ ಪಾಟೀಲ್, ಅನ್ವರ್ ಪಟೇಲ್, ಸಾಬೀರ್ ಗನಿ, ನಾಗಯ್ಯಸ್ವಾಮಿ, ಶ್ರೀಧರ್, ಮಹಿಳಾ ಮುಖಂಡರಾದ ಮಹಾನಂದಾ ಪಡಶೆಟ್ಟಿ, ಅನುರಾಧಾ, ಗೀತಾ, ಚಂದ್ರಕಲಾ, ಪದ್ಮಿನಿ, ಫತ್ರುಬಿ ಬೇಗಂ, ವಿಜಯಶ್ರೀ, ಮಹಾದೇವಿ, ಸಂಗೀತಾ, ಭಾಗ್ಯಶ್ರೀ, ಮಮತಾ, ಬಬೀತಾ, ಮಲ್ಲಮ್ಮ, ಪ್ರಭಾವತಿ, ನೀಲಮ್ಮ, ಪೂರ್ಣಿಮಾ, ಪ್ರೇಮಾ ಮುಂತಾದವರು ಪಾಲ್ಗೊಂಡಿದ್ದರು.

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR